ಸಂಪುಟ : 8 ಸಂಚಿಕೆ : 251 ಪುಟ : 4 ಬೆಲೆ : 3.00 ರವಿವಾರ ನವ್ಹಂಬರ್ 12, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 251 Pages : 4 Price : 3.00 Sunday November 12, 2023 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ನ.15ರಂದು ನರಗುಂದದಲ್ಲಿ ಜಿಲ್ಲಾಧಿಕಾರಿಗಳ ಜನತಾ ದರ್ಶನ



■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಮಾರ್ಗದರ್ಶನದಂತೆ ಕಂದಾಯ ಇಲಾಖೆಗೆ ಸಂಬಂಧಿಸಿದಂತೆ ಸಾರ್ವಜನಿಕರ ಅಹವಾಲುಗಳನ್ನು ಆಲಿಸಿ, ಸೂಕ್ತ ಪರಿಹಾರ ಒದಗಿಸುವ ನಿಟ್ಟಿನಲ್ಲಿ ನವೆಂಬರ್ 13 ರಂದು ನರಗುಂದ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರ ನೇತೃತ್ವದಲ್ಲಿ ಹಮ್ಮಿಕೊಳ್ಳಲಾಗಿದ್ದ ಜನತಾ ದರ್ಶನ ಕಾರ್ಯಕ್ರಮವನ್ನು ಕಾರಣಾಂತರಗಳಿಂದ ಮುಂದೂಡಿ ನವೆಂಬರ್ 15 ರಂದು ಮಧ್ಯಾಹ್ನ 2 ಗಂಟೆಯಿಂದ ನರಗುಂದ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಶಿವಾನುಭವ ಕಾರ್ಯಕ್ರಮ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಬಸವ ಕೇಂದ್ರ ಹಾಗೂ ಜಾಗತಿಕ ಲಿಂಗಾಯತ ಮಹಾಸಭೆ ಸಂಯುಕ್ತ ಆಶ್ರಯದಲ್ಲಿ ರವಿವಾರ ಸಂಜೆ 6.30 ಗಂಟೆಗೆ ಒಕ್ಕಲಗೇರಿ ಓಣಿಯಲ್ಲಿರುವ ಚಿಲ್ಲಾಳೇಶ್ವರ ಮಠದ ಶಾಲೆಯಲ್ಲಿ ಶಿವಾನುಭವ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶರಣ ಸಿ.ಎ. ಕೆ.ಎಸ್. ಚೆಟ್ಟಿ ವಹಿಸುವರು. ಪೂಜ್ಯ ಲಿಂ. ಜಗದ್ಗುರು ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರ 5ನೇ ಪುಣ್ಯಸ್ಮರಣೆ ಕುರಿತು ವಿಶ್ರಾಂತ ಮುಖ್ಯೋಪಾಧ್ಯಾಯ ಶಿವನಗೌಡ ಗೌಡರ ಉಪನ್ಯಾಸ ನೀಡಲಿದ್ದಾರೆ. ಎಲ್ಲಾ ಸದಸ್ಯರು ಮತ್ತು ಆಸಕ್ತರು ಸಮಯಕ್ಕೆ ಸರಿಯಾಗಿ ಆಗಮಿಸಲು ಕಾರ್ಯದರ್ಶಿ ಶೇಖಣ್ಣ ಕವಳಿಕಾಯಿ ಹಾಗೂ ಕಿರಣ ತಿಪ್ಪಣ್ಣನವರ ವಿನಂತಿಸಿದ್ದಾರೆ.

### ಜಿಲ್ಲೆಯಾದ್ಯಂತ ದೀಪಾವಳಿ ಹಬ್ಬಕ್ಕೆ ಸಡಗರದ ಸಿದ್ಧತೆ । ಮಾರುಕಟ್ಟೆಯಲ್ಲಿ ಜನಜಾತ್ರೆ

# ಬೆಳಕಿನ ಹಬ್ಬಕ್ಕೆ ಸಂಭ್ರಮದ ತಯಾರಿ



■ವಿಜಯಸಾಕ್ಷಿ ಸುದ್ದಿ, ಗದಗ

ದೇಶದಾದ್ಯಂತ ಅತ್ಯಂತ ಸಡಗರ-ಸಂಭ್ರಮದಿಂದ ಆಚರಿಸಲ್ಪಡುವ ದೀಪಗಳ ಹಬ್ಬ ದೀಪಾವಳಿಗೆ ಅವಳಿ ನಗರ ಸಿದ್ಧವಾಗುತ್ತಿದೆ. ಕತ್ತಲು ಕಳೆದು ಬೆಳಕು ಬೀರುವ ಹಬ್ಬದ ಸಂಭ್ರಮ ಜಿಲ್ಲೆಯಾದ್ಯಂತ ಮನೆಮಾಡಿದೆ. ಮಾರುಕಟ್ಟೆಯಲ್ಲಂತೂ ಹಬ್ಬದ ಖರೀದಿ ಜೋರಾಗಿದ್ದು, ಪ್ರತಿಯೊಬ್ಬರೂ ಎಲ್ಲ ಚಿಂತೆಗಳನ್ನು ಮರೆತು ನಾಲ್ಕಾರು ದಿನಗಳಿಂದ ಹಬ್ಬದಾಚರಣೆಗೆ ಸಿದ್ಧತೆಗಳನ್ನು ನಡೆಸಿಕೊಳ್ಳುತ್ತಿದ್ದಾರೆ.

ಹಬ್ಬದ ಹಿನ್ನೆಲೆಯಲ್ಲಿ ಅವಳಿ ನಗರದ ಅಂಗಡಿಗಳಲ್ಲಿ ದೀಪಾವಳಿಯ ಭರಪೂರ ಕೊಡುಗೆಗಳ ಸುರಿಮಳೆಯಾಗುತ್ತಿದೆ. ಅನೇಕ ಕಡೆ ಡಿಸ್ಕೌಂಟ್ ಇತ್ಯಾದಿ ಕೊಡುಗೆಗಳು ಗ್ರಾಹಕರನ್ನು ಅಂಗಡಿಯತ್ತ ಸೆಳೆಯುತ್ತಿವೆ. ಅಂತೆಯೇ, ಸಾಂಪ್ರದಾಯಿಕ ಮಣ್ಣಿನ ಹಣತೆಗಳೂ ಹೆಚ್ಚೆಚ್ಚು ಬಿಕರಿಯಾಗುತ್ತಿರುವುದು ಕುಂಬಾರರ ಬಾಳಿಗೆ ಬೆಳಕು ನೀಡುವಂತಾಗಿದೆ.

ಜಿಲ್ಲೆಯ ಪ್ರಮುಖ ಅಂಗಡಿಗಳಷ್ಟೇ ಅಲ್ಲದೆ, ಮನೆಗಳನ್ನು ಕೂಡ ಸ್ವಚ್ಛಗೊಳಿಸಿ, ಸುಣ್ಣ-ಬಣ್ಣ, ವಿದ್ಯುತ್ ದೀಪಾಲಂಕಾರದಿಂದ ಧನಲಕ್ಷ್ಮಿ ಪೂಜೆಗೆ ಅಣಿಯಾಗಿದ್ದಾರೆ. ಮಕ್ಕಳಂತೂ ಹೊಸ ಬಟ್ಟೆ ಧರಿಸಿ ಹಬ್ಬದ ಕಜ್ಜಾಯ ಸವಿಯಲು ಕಾತುರದಿಂದ ಎದುರುನೋಡುತ್ತಿದ್ದರೆ, ಲಕ್ಷ್ಮೀಪೂಜೆಗೆ ಏರಿಸುವ ಸೀರೆ ಖರೀದಿಯಲ್ಲಿ ಮಹಿಳೆಯರು ನಿರತರಾಗಿದ್ದರು.

ಮಾರುಕಟ್ಟೆಯಲ್ಲಿ ನಾನಾ ಬಗೆಯ ಆಕಾಶ ಬುಟ್ಟಿಗಳು ಲಗ್ಗೆಯಿಟ್ಟಿದ್ದು, ಗ್ರಾಹಕರನ್ನು ಸೆಳೆಯುತ್ತಿವೆ. ಥರಾವರಿ ಮಣ್ಣಿನ ಹಣತೆ, ಪಿಂಗಾಣಿ ಹಣತೆ, ತೆಂಗಿನಕಾಯಿ ದೀಪ, ಆನೆ ದೀಪ, ನಕ್ಷತ್ರ ದೀಪ, ಗಣೇಶ ದೀಪ, ಲಕ್ಷ್ಮೀ ದೀಪ, ಚಟ್ಟಿ ದೀಪ ಹೀಗೆ ನಾನಾ ತರಹದ ಹಣತೆಗಳು ಗ್ರಾಹಕರನ್ನು ಆಕರ್ಷಿಸುತ್ತಿವೆ. ▸▸3 ನೇ ಪುಟಕ್ಕೆ

> ಗ್ರಾಹಕರು ಕಳೆದೊಂದು ವಾರದಿಂದಲೇ ಹಬ್ಬಕ್ಕೆ ಬೇಕಾದ ವಸ್ತುಗಳ ಖರೀದಿಯಲ್ಲಿ ತೊಡಗಿದ್ದಾರೆ. ಅದರಲ್ಲೂ ಬಟ್ಟೆ ಹಾಗೂ ಮಕ್ಕಳಿಗೆ ಅಗತ್ಯವಿರುವ ವಸ್ತುಗಳ ಖರೀದಿ ಜೋರಾಗಿದೆ. ಕಳೆದ ವರ್ಷಕ್ಕೆ ಹೋಲಿಸಿದರೆ, ಪ್ರಸಕ್ತ ವರ್ಷ ವ್ಯಾಪಾರ-ವಹಿವಾಟು ಉತ್ತಮವಾಗಿದೆ.
>
> -ಸುರೇಶ, ಬಟ್ಟೆ ವ್ಯಾಪಾರಿ.

**ಖರೀದಿಯಲ್ಲಿ ಮಹಿಳೆಯರದೇ ಮೇಲುಗೈ**

ರಾಜ್ಯ ಸರಕಾರದಿಂದ ಉಚಿತ ಪ್ರಯಾಣದ 'ಶಕ್ತಿ' ಯೋಜನೆ ಜಾರಿಯಾದ ಮೇಲೆ ಅವಳಿ ನಗರದ ಮಾರುಕಟ್ಟೆಯಲ್ಲಿ ಮಹಿಳೆಯರ ಸಂಖ್ಯೆ ಹೆಚ್ಚಾಗಿದೆ. ದೀಪಾವಳಿ ಹಬ್ಬಕ್ಕೆ ಬೇಕಾದ ಅಗತ್ಯ ವಸ್ತುಗಳ ಖರೀದಿಗೆ ಗ್ರಾಮೀಣ ಭಾಗದಿಂದ ನಿತ್ಯ ಸಾವಿರಾರು ಮಹಿಳೆಯರು ನಗರಕ್ಕೆ ಆಗಮಿಸುತ್ತಿದ್ದಾರೆ. ತಾಲೂಕು ಮಟ್ಟದಲ್ಲಿ ಖರೀದಿ ಮಾಡುವ ಮಹಿಳೆಯರೂ ನಗರಕ್ಕೆ ಲಗ್ಗೆ ಇಟ್ಟಿದ್ದಾರೆ. ಹೀಗಾಗಿ ಅವಳಿ ನಗರದ ಮಾರುಕಟ್ಟೆಗಳಲ್ಲಿ ಜನಜಂಗುಳಿ ತಗ್ಗುತ್ತಿಲ್ಲ.



### ಜಿಲ್ಲಾಡಳಿತ ಭವನದಲ್ಲಿ ಏರ್ಪಡಿಸಿದ್ದ ವೀರವನಿತೆ ಒನಕೆ ಓಬವ್ವ ಜಯಂತಿ ಕಾರ್ಯಕ್ರಮದಲ್ಲಿ ಅಪರ ಡಿಸಿ ಅನ್ನಪೂರ್ಣ

# ಓಬವ್ವಳ ಧೈರ್ಯ, ಸಾಹಸ ಮಹಿಳೆಯರಿಗೆ ಆದರ್ಶ



■ವಿಜಯಸಾಕ್ಷಿ ಸುದ್ದಿ, ಗದಗ

ಇತಿಹಾಸವನ್ನು ಗಮನಿಸಿದಾಗ ವೀರ ಮಹಿಳೆಯರ ಪಟ್ಟಿಯಲ್ಲಿ ಒನಕೆ ಓಬವ್ವ ಅಗ್ರಗಣ್ಯರಾಗಿದ್ದು, ಅವರ ಧೈರ್ಯ, ಸಾಹಸ ಎಲ್ಲ ಕಾಲಕ್ಕೂ ಎಲ್ಲ ಮಹಿಳೆಯರಿಗೂ ಆದರ್ಶ ಪ್ರಾಯ ಎಂದು ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ನುಡಿದರು.

ಅವರು, ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹೋಗದಲ್ಲಿ ಜಿಲ್ಲಾಡಳಿತ ಭವನದ ಅಡಿಟೋರಿಯಂ ಸಭಾಂಗಣದಲ್ಲಿ ಶನಿವಾರದಂದು ವೀರವನಿತೆ ಒನಕೆ ಓಬವ್ವ ಜಯಂತಿಯಲ್ಲಿ ವೀರ ವನಿತೆ ಒನಕೆ ಓಬವ್ವ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಗೌರವ ಸಮರ್ಪಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತ ಗಂಗಪ್ಪ ಎಂ., ಆರಕ್ಷಕ ವೃತ್ತ ನಿರೀಕ್ಷಕ ಎಸ್.ಎಂ.ಶಿರಗುಪ್ಪಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಹಿರೇಮಠ, ಸಮಾಜದ ಗಣ್ಯರು, ಮುಖಂಡರು, ಸಾರ್ವಜನಿಕರು, ವಿವಿಧ ಇಲಾಖೆ ಅಧಿಕಾರಿ, ಸಿಬ್ಬಂದಿಗಳು ಉಪಸ್ಥಿತರಿದ್ದರು.

ವೆಂಕಟೇಶ ಅಲಕೋಡ ಹಾಗೂ ಸಂಗಡಿಗರು ನಾಡಗೀತೆ ಹಾಗೂ ಗೀತ ಗಾಯನ ಪ್ರಸ್ತುತ ಪಡಿಸಿದರು.

ಕಾರ್ಯಕ್ರಮದಲ್ಲಿ ಒನಕೆ ಓಬವ್ವ ವೇಷಧಾರಿಯಾಗಿ ಕು.ನಿವೇದಿತಾ ಹೊಸಮನಿ ಸಭಿಕರ ಗಮನ ಸೆಳೆದಳು.



### ಪತ್ರಿಕಾಗೋಷ್ಠಿಯಲ್ಲಿ ನಗರಸಭಾಧ್ಯಕ್ಷೆ ಉಷಾ ದಾಸರ ಆರೋಪ

# ನಗರೋತ್ಥಾನ ಯೋಜನೆ ಹಣ ಬಿಡುಗಡೆಗೆ ವಿಳಂಬ

■ವಿಜಯಸಾಕ್ಷಿ ಸುದ್ದಿ, ಗದಗ

ನಗರೋತ್ಥಾನ ಯೋಜನೆಯ 40 ಕೋಟಿ ರೂ ಅನುದಾನ ಬಿಡುಗಡೆ ಮಾಡುವಲ್ಲಿ ಕಾಂಗ್ರೆಸ್ ಸರ್ಕಾರ ವಿಳಂಬ ಮಾಡುತ್ತಿದೆ. ಸಚಿವ ಎಚ್.ಕೆ. ಪಾಟೀಲ ಅವರಿಗೆ ಈ ಬಗ್ಗೆ ಎಷ್ಟೇ ಮನವಿ ಮಾಡಿದರೂ ನಗಣ್ಯವಾಗಿ ಕಾಣುತ್ತಿದ್ದಾರೆ ಎಂದು ನಗರಸಭೆ ಅಧ್ಯಕ್ಷೆ ಉಷಾ ದಾಸರ ಆರೋಪಿಸಿದರು.

ಪತ್ರಿಕಾ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ನಗರೋತ್ಥಾನ ಅನುದಾನದ ಬಗ್ಗೆ ಎಷ್ಟೇ ವಿನಂತಿಸಿದರೂ ಕೂಡ ದಿನಗಳನ್ನು ಮುಂದೂಡುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ನಗರದ ಅಭಿವೃದ್ಧಿಗೆ ಹಿನ್ನಡೆಯಾಗಿದೆ. ಸಚಿವ ಸಂಪುಟದ ಒಪ್ಪಿಗೆ ಪಡೆದು ಆದಷ್ಟು ಬೇಗ ಅನುದಾನ ಬಿಡುಗಡೆ ಮಾಡುವಂತೆ ಸಚಿವ ಎಚ್.ಕೆ. ಪಾಟೀಲ ಅವರನ್ನು ಒತ್ತಾಯಿಸುತ್ತೇವೆ ಎಂದರು.

ಸ್ಥಾಯಿ ಸಮಿತಿ ಅಧ್ಯಕ್ಷ ಅನಿಲ್ ಅಬ್ಬಿಗೇರಿ ಮಾತನಾಡಿ, ಈ ಹಿಂದೆ ಕಾಂಗ್ರೆಸ್ ಅವಧಿಯಲ್ಲಿ ನೀರು ನಿರ್ವಹಣೆ ಉತ್ತಮವಾಗಿ ಇರಲಿಲ್ಲ. ನಿರ್ವಹಣೆಗೆ ಖಾಸಗಿ ಕಂಪನಿಗೆ ಗುತ್ತಿಗೆ ನೀಡಿ ಕೋಟ್ಯಾಂತರ ರೂ. ಹಣ ವ್ಯಯಿಸಲಾಗಿತ್ತು. ಆದರೆ, ಬಿಜೆಪಿ ಅವಧಿಯಲ್ಲಿ ನೀರು ನಿರ್ವಹಣೆಯನ್ನು ನಗರಸಭೆ ಖುದ್ದು ವಹಿಸಿಕೊಂಡಿದೆ. ಇದರಿಂದ ನಿರ್ವಹಣೆ ಉತ್ತಮಗೊಂಡು, ಆರ್ಥಿಕ ಸಂಪನ್ಮೂಲ ಸೋರಿಕೆಗೆ ತಡೆ ನೀಡಲಾಗಿದೆ. ನಗರಸಭೆ ಆಸ್ತಿಗಳನ್ನು ಉಳಿಸಿಕೊಳ್ಳುವಲ್ಲಿ ಹಿಂದಡಿ ಇಡುವುದಿಲ್ಲ. ಕರ ವಸೂಲಿ ಪ್ರಕ್ರಿಯೆ ಚುರುಕುಗೊಳಿಸಲಾಗುವುದು ಎಂದರು.

ಚುನಾವಣಾ ಪೂರ್ವದಲ್ಲಿ ನಗರೋತ್ಥಾನ ಅನುದಾನ ಬಿಡುಗಡೆ ಆಗಬೇಕಿತ್ತು. ಚುನಾವಣೆ ನೀತಿ ಸಂಹಿತೆ ಹಿನ್ನೆಲೆಯಲ್ಲಿ ಮುಂದಿನ ಪ್ರಕ್ರಿಯೆ ಜರುಗಲಿಲ್ಲ. ಈಗ ಕಾಂಗ್ರೆಸ್ ಸರ್ಕಾರ ಬಂದು ನಾಲ್ಕು ತಿಂಗಳಾಗಿದೆ. ಸಚಿವ ಎಚ್.ಕೆ. ಪಾಟೀಲ ಯಾವುದೇ ದುರುದ್ದೇಶ ಹೊಂದದೆ ಅನುದಾನ ಬಿಡುಗಡೆ ಮಾಡಿಸಬೇಕು ಎಂದು ಅನಿಲ್ ಅಬ್ಬಿಗೇರಿ ಒತ್ತಾಯಿಸಿದರು.

ಸುನಂದಾ ಬಾಕಳೆ, ರಾಘವೇಂದ್ರ ಯಳವತ್ತಿ, ಪ್ರಕಾಶ ಅಂಗಡಿ ಮುಂತಾದವರು ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.




**ಸುಳ್ಳು ಆರೋಪ**

ಕರ ವಸೂಲಿಯಲ್ಲಿ ಯಾವುದೇ ತಾರತಮ್ಯ ಇಲ್ಲ. ಪ್ರಭಾವಿಗಳನ್ನು ಬಿಟ್ಟು, ಸಾಮಾನ್ಯರಿಗೆ ತೆರಿಗೆ ಪಾವತಿಸುವಂತೆ ತೊಂದರೆ ನೀಡುತ್ತಿದ್ದಾರೆ ಎಂದು ನಗರಸಭೆ ಅಧಿಕಾರಿಗಳ ಮೇಲೆ ಇರುವ ಆರೋಪ ಸುಳ್ಳು. ದೀಪಾವಳಿ ನಂತರ ಕರ ವಸೂಲಿ ಪ್ರಕ್ರಿಯೆಗೆ ವೇಗ ನೀಡುತ್ತೇವೆ ಎಂದು ಉಷಾ ದಾಸರ ಹೇಳಿದರು.

### 'ಕರ್ನಾಟಕ ಏಕೀಕರಣದ ರೂವಾರಿಗಳಿಗೆ ಧನ್ಯ ನಮನ' ಕಾರ್ಯಕ್ರಮದಲ್ಲಿ ಉಮೇಶ ಹುಚ್ಚಯ್ಯನಮಠ

# ಕರ್ನಾಟಕ ಏಕೀಕರಣದ ತವರು ನೆಲ ಗದಗ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕರ್ನಾಟಕದ ಏಕೀಕರಣದ ರೂವಾರಿ ಅಂದಾನಪ್ಪ ದೊಡ್ಡಮೇಟಿಯವರ ಕಲ್ಪನೆಯ ಭವ್ಯ ಭಾವಕ್ಕೆ ತಕ್ಕುದಾದ ಭುವನೇಶ್ವರಿಯ ದಿವ್ಯ ಚಿತ್ರ ನೀಡಿದವರು ಬಟ್ಟೂರಿನ ಎನ್.ಸಿ. ಪಾಟೀಲರು ಎಂಬುದು ಹೆಮ್ಮೆಯ ವಿಚಾರ. ಇದು ಕುವೆಂಪು ಕಲ್ಪನೆಯ ವಿಚಾರಗಳನ್ನು ಒಡಮೂಡಿಸುತ್ತದೆ ಎಂದು ಬಟ್ಟೂರು ಗ್ರಾ.ಪಂ ಅಧ್ಯಕ್ಷ ಜಗದೀಶಗೌಡ ಪಾಟೀಲ ಹೇಳಿದರು.

ಅವರು ಲಕ್ಷ್ಮೇಶ್ವರ ತಾಲೂಕು ಕಸಾಪ ವತಿಯಿಂದ ಬಟ್ಟೂರು ಸರಕಾರಿ ಪ್ರೌಢಶಾಲೆಯಲ್ಲಿ ಕರ್ನಾಟಕ ನಾಮಕರಣದ ಸುವರ್ಣ ಸಂಭ್ರಮ ಕಾರ್ಯಕ್ರಮ ಮಾಲಿಕೆಯಡಿ ಹಮ್ಮಿಕೊಂಡ 'ಕರ್ನಾಟಕ ಏಕೀಕರಣದ ರೂವಾರಿಗಳಿಗೆ ಧನ್ಯ ನಮನ' ಕಾರ್ಯಕ್ರಮದಲ್ಲಿ ಕನ್ನಡ ಮಾತೆ ಭುವನೇಶ್ವರಿಯ ತೈಲ ವರ್ಣಚಿತ್ರ ಕಲಾವಿದ ಬಟ್ಟೂರಿನ ಸಿ.ಎನ್. ಪಾಟೀಲ ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮ ಉದ್ಘಾಟಿಸಿದ ಕ್ಷೇತ್ರ ಶಿಕ್ಷಣಾಧಿಕಾರಿ ಜಿ.ಎಂ. ಮುಂದಿನಮನಿ ಮಾತನಾಡಿ, ಬೆಳಗಾವಿಯಂತಹ ಪ್ರದೇಶಗಳಲ್ಲಿ ಮಾತೃ ಭಾಷೆಯು ಬದುಕಿನ ಹೋರಾಟವಾಗುತ್ತಿದೆ. ಅದಕ್ಕಾಗಿ ಕನ್ನಡ, ಕನ್ನಡತನ ನಮ್ಮ ಅಂತರಂಗದ ಶಕ್ತಿಯಾಗಬೇಕು ಎಂದರು.

ಕರ್ನಾಟಕ ಏಕೀಕರಣ ರೂವಾರಿ ಅಂದಾನಪ್ಪ ದೊಡ್ಡಮೇಟಿಯವರ ಕುರಿತು ಉಪನ್ಯಾಸ ನೀಡಿದ ಶಿಕ್ಷಣ ಸಂಯೋಜಕ ಉಮೇಶ ಹುಚ್ಚಯ್ಯನಮಠ, ಕರ್ನಾಟಕ ಏಕೀಕರಣದ ತವರು ನೆಲವಾದ ಗದಗ ಜಿಲ್ಲೆಯ ಅಂದಾನಪ್ಪ ದೊಡ್ಡಮೇಟಿಯವರು ಇಲ್ಲಿಂದಲೇ ಕರ್ನಾಟಕ ಏಕೀಕರಣದ ಸೂತ್ರ ಹೆಣೆದರು ಎಂದರು.

ಮುಖ್ಯೋಪಾಧ್ಯಾಯ ವಿ.ಬಿ. ಪಾಟೀಲ ಅಧ್ಯಕ್ಷೀಯ ನುಡಿಗಳನ್ನಾಡಿದರು. ಈ ವೇಳೆ ಕಸಾಪ ವಿದ್ಯಾರ್ಥಿ ಘಟಕವನ್ನು ಉದ್ಘಾಟಿಸಿ ಪ್ರಮಾಣಪತ್ರ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಬಸನಗೌಡ ಪಾಟೀಲ, ಶಿಕ್ಷಣಾಧಿಕಾರಿಗಳ ಸಂಘದ ಅಧ್ಯಕ್ಷ ಎಂ.ಬಿ. ಹೊಸಮನಿ, ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಕಾರ್ಯದರ್ಶಿ ಎನ್.ಎನ್. ಸುಣಗಾರ, ಸಿಆರ್‌ಪಿ ಜಿ.ಆರ್. ಪಾಟೀಲ, ಶಿಕ್ಷಕರಾದ ಎಚ್.ಎಫ್. ನದಾಫ್, ಎಂ.ಎಸ್. ಮಳಿಮಠ, ಎಸ್.ಬಿ. ಅಣ್ಣಿಗೇರಿ, ಡಿ.ಸಿ. ಪತ್ತಾರ, ವೈ.ಪಿ. ▸▸3 ನೇ ಪುಟಕ್ಕೆ

## ಉದ್ಯಾನವನದಲ್ಲಿ ಉದಯರಾಗ, ಸಂಧ್ಯಾರಾಗ

■ವಿಜಯಸಾಕ್ಷಿ ಸುದ್ದಿ, ಗದಗ

ಉದ್ಯಾನವನದಲ್ಲಿ ಉದಯರಾಗ ಹಾಗೂ ಸಂಧ್ಯಾರಾಗ ಕಾರ್ಯಕ್ರಮವನ್ನು ರವಿವಾರ ದಿನಾಂಕ:12.11.2023 ರಂದು ಏರ್ಪಡಿಸಲಾಗಿದೆ. ನವೆಂಬರ್ 12 ರವಿವಾರ ಬೆಳಿಗ್ಗೆ:6.30 ರಿಂದ 7.30 ರವರೆಗೆ ರಾಜೀವಗಾಂಧಿ ನಗರದ ಶಿವಶರಣ ಹರಳಯ್ಯ ಉದ್ಯಾನವನದಲ್ಲಿ ಶ್ರೀಮತಿ ಸವಿತಾ ಕುಪ್ಪಸದ ಅವರಿಂದ ಸುಗಮ ಸಂಗೀತ, ವಿಶ್ವೇಶ್ವರಯ್ಯ ನಗರದ ವಿಶ್ವೇಶ್ವರಯ್ಯ ಉದ್ಯಾನವನದಲ್ಲಿ ಶ್ರೀ ಸಿದ್ದೇಶ್ವರಶಾಸ್ತ್ರೀ ಇವರಿಂದ ಸುಗಮ ಸಂಗೀತ ಹಾಗೂ ಸಾಯಂಕಾಲ: 5.30 ರಿಂದ 6.30 ಗಂಟೆಯವರೆಗೆ ಭೀಷ್ಮಕೆರೆಯ ಬಸವೇಶ್ವರ ಪುತ್ಥಳಿ ಆವರಣದಲ್ಲಿ ನಡೆಯುವ ಸಂಧ್ಯಾರಾಗ ಕಾರ್ಯಕ್ರಮದಲ್ಲಿ ಕು.ನಿಕಿತಾ ಹೆಬಸೂರು ಇವರಿಂದ ಸುಗಮ ಸಂಗೀತ ಕಾರ್ಯಕ್ರಮಗಳನ್ನು ಏರ್ಪಡಿಸಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ನೂತನ ತಹಸೀಲ್ದಾರರಾಗಿ ವಾಸುದೇವ ವಿ.ಸ್ವಾಮಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿಗೆ ನೂತನ ತಹಸೀಲ್ದಾರ ಹಾಗೂ ತಾಲೂಕು ದಂಡಾಧಿಕಾರಿಗಳಾಗಿ ವಾಸುದೇವ್ ವಿ.ಸ್ವಾಮಿ ಅಧಿಕಾರ ವಹಿಸಿಕೊಂಡಿದ್ದಾರೆ. ಕಲಬುರಗಿ ಜಿಲ್ಲೆಯಲ್ಲಿ ಪ್ರೊಬೇಷನರಿ ತಹಸೀಲ್ದಾರರಾಗಿ, ಕಂದಾಯ ಗ್ರಾಮ ಯೋಜನೆ ನೋಡಲ್ ಅಧಿಕಾರಿಯಾಗಿದ್ದ ಸಂದರ್ಭದಲ್ಲಿ ಇವರು ದಾಖಲೆಯ ಮಟ್ಟದ ಕಾರ್ಯ ನಿರ್ವಹಿಸಿದ್ದಾರೆ.

ಅಧಿಕಾರ ವಹಿಸಿಕೊಂಡ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ತಹಸೀಲ್ದಾರ್ ಆಗಿ ಲಕ್ಷ್ಮೇಶ್ವರ ತಾಲೂಕಿನಲ್ಲಿ ಸೇವೆ ಮಾಡುತ್ತಿದ್ದೇನೆ. ಇದು ಹೊಸ ತಾಲೂಕು ಕೇಂದ್ರವಾಗಿದ್ದರಿಂದ ಪೂರ್ಣ ಪ್ರಮಾಣದ ತಾಲೂಕು ಕಚೇರಿಗಳಿಲ್ಲ. ▸▸3ನೇ ಪುಟಕ್ಕೆ

## ಹಾಸನಾಂಬೆಯ ದರ್ಶನ ಪಡೆದ ಸಭಾಪತಿ ಬಸವರಾಜ ಹೊರಟ್ಟಿ



■ವಿಜಯಸಾಕ್ಷಿ ಸುದ್ದಿ, ಹಾಸನ

ಪುರಾಣದ ಜೊತೆಗೆ ಅನೇಕ ವೈಶಿಷ್ಟ್ಯಗಳನ್ನ ಹೊಂದಿರುವ ಹಾಸನಾಂಬೆಯ ದರ್ಶನ ಪಡೆದಿದ್ದು ನನ್ನ ಸೌಭಾಗ್ಯ ಎಂದು ಸಭಾಪತಿ ಬಸವರಾಜ್ ಹೊರಟ್ಟಿ ಹೇಳಿದರು.

ಹಾಸನದ ಹಾಸನಾಂಬೆ ದೇವಸ್ಥಾನಕ್ಕೆ ಭೇಟಿ ನೀಡಿ, ದರ್ಶನ ಪಡೆದ ನಂತರ ಮಾತನಾಡಿದ ಅವರು, ವರ್ಷಕ್ಕೊಮ್ಮೆ ಬಾಗಿಲು ತೆರೆಯುವ ಈ ದೇಗುಲದಲ್ಲಿ ಅನೇಕ ಪವಾಡಗಳ ಕುರಿತಂತೆ ಕೇಳಿ ಆಶ್ಚರ್ಯವಾಗಿದೆ. ಇಂತಹ ಪವಿತ್ರ ಸ್ಥಳಕ್ಕೆ ಬಂದು ಹಲವಾರು ಮಾಹಿತಿಯನ್ನು ತಿಳಿದು ಪುನೀತನಾಗಿದ್ದೇನೆ.

ಹಾಸನಾಂಬೆಯಲ್ಲಿ ಲೋಕ ಕಲ್ಯಾಣವಾಗಲಿ ಎಂದು ಪ್ರಾರ್ಥಿಸಿದ್ದೇನೆ. ಉತ್ತಮ ಮಳೆ-ಬೆಳೆ ಬರುವ ಮೂಲಕ ನಾಡಿನ ಜನತೆಗೆ ಆ ತಾಯಿ ಸಕಲ ಸೌಭಾಗ್ಯಗಳನ್ನು ದಯಪಾಲಿಸಲಿ ಎಂದು ಕೋರಿದ್ದೇನೆ ಎಂದರು.

ಈ ಸಂದರ್ಭದಲ್ಲಿ ಹೊರಟ್ಟಿಯವರ ಕಿರಿಯ ಪುತ್ರ ಭರತ್ ಹೊರಟ್ಟಿ ದಂಪತಿಗಳು, ಡಾ. ನರಸಿಂಹಮೂರ್ತಿ, ನವೀನ್ ಗೌಡ ಮುಂತಾದವರು ಉಪಸ್ಥಿತರಿದ್ದರು.

## ಕವನ

# ನಾನೇ ಗೋಮಾತೆ

ಕೃಷ್ಣ ಪರಮಾತ್ಮನಿಗಂತೂ ಪ್ರೀತಿದಾಯಕವಾಗಿ
ದೇವಾನುದೇವತೆಗಳಿಂದ ಪೂಜಿಸಲ್ಪಟ್ಟ ನಾನು
ಮನುಜ ಸಸ್ಯ ಸಂಕುಲಕ್ಕೆ ಆಶ್ರಯದಾತೆ
ನಾನೇ ಗೋಮಾತೆ

ಪುಟ್ಟ ಕಂದಮ್ಮಗಳಿಂದ ಹಿಡಿದು ವಯೋವೃದ್ಧರೆಲ್ಲ
ಅಮೃತಸಮನಾದ ನನ್ನ ಹಾಲು ಸೇವಿಸುವರು
ಗೋಮಯ, ಗೋಮೂತ್ರದಿಂದ ಗೊಬ್ಬರ
ಹಾಗೂ ಔಷಧ ತಯಾರಿಸುವರು
ನಾನೇ ಗೋಮಾತೆ

ನನ್ನ ಹಾಲಿನಿಂದ ಸಿಹಿ ತಿನಿಸು, ಮೊಸರು
ಬೆಣ್ಣೆ, ತುಪ್ಪ ತಯಾರಿಸುವರು
ಹಬ್ಬ ಹರಿದಿನಗಳಲ್ಲಿ ಪಂಚಾಮೃತ ಮಾಡುವರು
ಗೃಹ ಪ್ರವೇಶಕ್ಕೆ ನನ್ನ ಕರೆಸುವರು
ನಾನೇ ಗೋಮಾತೆ



ಮೇವು, ಎಲೆ, ಅಳಿದುಳಿದ ಆಹಾರ ತಿಂದರೂ
ಮನುಜರಿಗೆಲ್ಲ ಹಾಲನ್ನೇ ನೀಡುವೆ ನಾನು
ಇಷ್ಟಾದರೂ ನನ್ನ ಉಪಕಾರ ಸ್ಮರಿಸದೇ
ನಿರ್ದಾಕ್ಷಿಣ್ಯವಾಗಿ ವಧಿಸುತಿಹರು
ನನ್ನ ಮೂಕರೋದನ ಕೇಳುವವರಾರು
ನನಗೆ ರಕ್ಷಣೆ ನೀಡುವರಾರು
ನಾನೇ ಗೋಮಾತೆ

ಜನ್ಮದಾತೆ, ಭೂಮಾತೆ , ಗೋಮಾತೆಯ
ಉಪಕಾರ ಸ್ಮರಿಸು ನೀ ಮನುಜಾ
ಕಾಲ ಬದಲಾದರೂ ಮರೆಯಬೇಡ ಮಾನವೀಯತೆಯ
ಈ ಪುಣ್ಯಭೂಮಿಯಲ್ಲಿ ಪುಣ್ಯಜೀವಿಯ
ರಕ್ಷಣೆ ಪ್ರತಿಯೊಬ್ಬರ ಕರ್ತವ್ಯವಾಗಲಿ
ದೇಶಭಕ್ತಿಯಂಕುರಕದು ಸಂತಸವ ತರಲಿ

– ಅಂಜನಾ ರಾಘವೇಂದ್ರ ಕುಬೇರ, ಗದಗ.

## ಅವಾಂತರ ಸೃಷ್ಟಿಸುತ್ತಿರುವ ಡೀಪ್ ಫೇಕ್ ವಿಡಿಯೋಗಳು

# ನಕಲಿ ತಡೆಗೆ ಭಾರತದಲ್ಲಿ ಕಾನೂನಿಲ್ಲವೇ?



ಸಿನಿಮಾ ರಂಗದ ಬಹುಭಾಷಾ ನಟಿಯರನ್ನು ಕೃತಕ ಬುದ್ಧಿಮತ್ತೆಯ ಮೂಲಕ ಅಶ್ಲೀಲವಾಗಿ ಕಾಣುವಂತೆ ಸೃಷ್ಟಿಸಿದ ವಿಡಿಯೋ ಕ್ಲಿಪ್ಪಿಂಗ್‌ಗಳು ಸೋಶಿಯಲ್ ಮೀಡಿಯಾಗಳಲ್ಲಿ ವೈರಲ್ ಆಗಿದೆ. ಬೆನ್ನಲ್ಲೇ, ಇದು ತಂತ್ರಜ್ಞಾನ ಮತ್ತು ಕೃತಕ ಬುದ್ಧಿಮತ್ತೆ (ಎಐ) ಬಳಕೆಯ ಬಗ್ಗೆ ಭಾರತೀಯ ಸೆಲೆಬ್ರಿಟಿಗಳಲ್ಲಿ ಚಿಂತೆಯನ್ನೂ ಹುಟ್ಟುಹಾಕಿದೆ.

ಈ ವೀಡಿಯೊ ಆನ್‌ಲೈನ್‌ನಲ್ಲಿ ಲಕ್ಷಾಂತರ ವೀಕ್ಷಣೆಗಳನ್ನು ಗಳಿಸಿದೆ ಮತ್ತು ಖ್ಯಾತ ಬಾಲಿವುಡ್ ನಟ ಅಮಿತಾಬ್ ಬಚ್ಚನ್ ಮತ್ತು ಕೇಂದ್ರ ಐಟಿ ರಾಜ್ಯ ಸಚಿವ (ಎಂಒಎಸ್) ರಾಜೀವ್ ಚಂದ್ರಶೇಖರ್ ಅವರ ಗಮನವನ್ನೂ ಸೆಳೆದಿದೆ. ಇದು ರಶ್ಮಿಕಾ ಮಂದಣ್ಣ ಅಲ್ಲ ಎಂದು ತಕ್ಷಣಕ್ಕೆ ಭಾವಿಸಲಾರದಷ್ಟು ನೈಜವಾಗಿರುವುದು ಎಐ ಇನ್ನು ಮುಂದೆ ಏನೆಲ್ಲ ಅವಾಂತರಗಳನ್ನು ಸೃಷ್ಟಿಸಬಹುದು ಎಂಬ ಆತಂಕವನ್ನೂ ಮೂಡಿಸಿದೆ.

ಈ ಎಐ ತಂತ್ರಜ್ಞಾನವು ಯಾರೋ ಒಬ್ಬರ ಮುಖವನ್ನು ಸ್ಕ್ಯಾನ್ ಮಾಡಿ ಇನ್ನೊಬ್ಬರ ದೇಹಕ್ಕೆ ಸುಲಭವಾಗಿ ಮತ್ತು ತಕ್ಷಣಕ್ಕೆ ಸನುಮಾನ ಬಾರದಂತೆ ಅಂಟಿಸಿ ಹೊಸ ನಕಲಿ ವಿಡಿಯೋಗಳನ್ನು ಕ್ಷಣಮಾತ್ರದಲ್ಲಿ ಸೃಷ್ಟಿಸಿಬಿಡುತ್ತದೆ. ಇದಕ್ಕಾಗಿ ಹಲವಾರು ಅಪ್ಲಿಕೇಶನ್‌ಗಳೂ ಸಿದ್ಧವಾಗಿಬಿಟ್ಟಿವೆ. ಈ ಹಿಂದೆಯೂ ಗ್ರಾಫಿಕ್ ಸಾಫ್ಟ್‌ವೇರ್‌ಗಳನ್ನು ಬಳಸಿ ಹಲವು ಸೆಲೆಬ್ರಿಟಿಗಳ ನಕಲಿ ವಿಡಿಯೊ, ಫೋಟೋಗಳನ್ನು ತಯಾರಿಸಿ ಸೋಶಿಯಲ್ ಮೀಡಿಯಾಗಳಲ್ಲಿ ಹರಿಬಿಡಲಾಗಿತ್ತು. ಆದರೆ, ಇಂಥ ಸರಕನ್ನು ನೋಡಿದ ಕೂಡಲೇ ಇದು ನಕಲಿ, ಗ್ರಾಫಿಕ್ ಮೂಲಕ ಸೃಷ್ಟಿಸಿದ್ದು ಎಂಬುದು ಗೊತ್ತಾಗಿಬಿಡುತ್ತಿತ್ತು.

ಆದರೆ, ಇದೀಗ ಸದ್ದುಮಾಡುತ್ತಿರುವ ಎಐ ಹಾಗಲ್ಲ. ಸಾದರಣವಾಗಿ ಅಸಲಿ–ನಕಲಿ ನಡುವಿನ ವ್ಯತ್ಯಾಸಗಳನ್ನು ಗುರುತಿಸಲಾಗದಷ್ಟು ಕರಾರುವಾಕ್ಕಾಗಿ ಫೋಟೋ, ವಿಡಿಯೋ ತಯಾರಿಸುವ ಸಾಮರ್ಥ್ಯ ಈ ತಂತ್ರಜ್ಞಾನಕ್ಕಿದೆ. ಈ ತಂತ್ರಜ್ಞಾನವನ್ನು ಹಲವಾರು ಪ್ರಮುಖ ವೇದಿಕೆಗಳಿಂದ ನಿಷೇಧಿಸಲಾಗಿದೆ ಏಕೆಂದರೆ ಇದನ್ನು ಮಾನಹಾನಿ ಅಥವಾ ತಪ್ಪು ಮಾಹಿತಿಯನ್ನು ಹರಡಲು ಬಳಸಬಹುದು.

ಎಐ ತಂತ್ರಜ್ಞಾನದಲ್ಲಿ ಮುಖದ ವೈಶಿಷ್ಟ್ಯಗಳನ್ನು ಕಲಿಯಲು ಡೀಪ್ ಫೇಕ್‌ಗಳಿಗೆ ಅನೇಕ ಚಿತ್ರಗಳು ಮತ್ತು ವೀಡಿಯೊಗಳೊಂದಿಗೆ ತರಬೇತಿ ನೀಡಲಾಗುತ್ತದೆ. ಈ ಪ್ರೋಗ್ರಾಂ, ನ್ಯೂರಲ್ ನೆಟ್‌ವರ್ಕ್ ಎರಡು ಆಯಾಮಗಳನ್ನು ಹೊಂದಿದೆ. ಮುಖ ಬದಲಿಸಿದ ವೀಡಿಯೊಗಳನ್ನು ರಚಿಸುವುದು ಮತ್ತು ಅಂತಹ ಮಾರ್ಪಾಡುಗಳನ್ನು ಪತ್ತೆಹಚ್ಚುವುದು. ಇಂದೊಥರ ಮುಳ್ಳನ್ನು ಮುಳ್ಳಿನಿಂದಲೇ ತೆಗೆಯುವ ವಿಧ. ಹಾಗೆಂದು, ಎಐನಿಂದಲೇ ಪತ್ತೆಹಚ್ಚಲು ಕಷ್ಟವಾಗುವಂತೆ ನಕಲಿ ವಿಡಿಯೋಗಳನ್ನು ಸೃಷ್ಟಿಸುವ ಸಾಮರ್ಥ್ಯ ಹೊಂದಿರುವ ತಂತ್ರಜ್ಞಾನ, ಕಲಾವಿದರೂ ಇದ್ದಾರೆ.

ಭಾರತೀಯ ಕಾನೂನಿನ ಅಡಿಯಲ್ಲಿ ಡೀಪ್‌ಫೇಕ್‌ಗಳನ್ನು ನೇರವಾಗಿ ಗುರುತಿಸಲು ಸಾಧ್ಯವಿಲ್ಲವಾದರೂ, ಐಟಿ ಕಾಯ್ದೆಯ ಸೆಕ್ಷನ್ 66ಇ ಮೂಲಕ ಈ ಸಮಸ್ಯೆಯನ್ನು ಪರೋಕ್ಷವಾಗಿ ಪರಿಹರಿಸುವ ಮಾರ್ಗವಿದೆ. ಈ ಕಾನೂನಿನ ಪ್ರಕಾರ, ಆ ವ್ಯಕ್ತಿಯ ಒಪ್ಪಿಗೆಯಿಲ್ಲದೆ ಮಾಧ್ಯಮದಲ್ಲಿ ಒಬ್ಬರ ಚಿತ್ರವನ್ನು ಸೆರೆಹಿಡಿಯುವುದು, ಪ್ರಕಟಿಸುವುದು ಅಥವಾ ಪ್ರಸಾರ ಮಾಡುವುದು ಕಾನೂನುಬಾಹಿರವಾಗಿದೆ. ಈ ಉಲ್ಲಂಘನೆಗೆ ಗರಿಷ್ಠ 2 ಲಕ್ಷ ರೂ.ಗಳ ದಂಡ ಅಥವಾ ಮೂರು ವರ್ಷಗಳ ಜೈಲು ಶಿಕ್ಷೆ ವಿಧಿಸಲಾಗುತ್ತದೆ.

ಇಲ್ಲಿ, ಕಂಟೆಂಟ್‌ಗಳನ್ನು ಯಾರು ಬೇಕಾದರೂ ಅಪ್‌ಲೋಡ್ ಮಾಡಬಹುದಾಗಿದ್ದರೂ ಸೋಶಿಯಲ್ ಮೀಡಿಯಾ ಪ್ಲಾಟ್‌ಫಾರ್ಮ್‌ಗಳ ಜವಾಬ್ದಾರಿಯೂ ಅಷ್ಟೇ ಇದೆ. ಏಕೆಂದರೆ, ಡೀಪ್‌ಫೇಕ್‌ಗಳ ಮೂಲಕ ತಪ್ಪು ಮಾಹಿತಿಯನ್ನು ಪ್ರಸಾರ ಮಾಡುವಾಗ ಮತ್ತು ಪ್ರಕಟಿಸುವಾಗಗೀ ಪ್ಲಾಟ್‌ಫಾರ್ಮ್‌ಗಳು ಎಚ್ಚರಿಕೆ ವಹಿಸಬೇಕಾಗುತ್ತದೆ. ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಸಾಮಾಜಿಕ ಮಾಧ್ಯಮ ಕಂಪನಿಗಳಿಗೆ ಎಚ್ಚರಿಕೆ ನೀಡಿದೆ.

ಇಂತಹ ನಕಲಿ ವಿಡಿಯೋಗಳಿಗೆ ಕಡಿವಾಣ ಹಾಕಲು ಮುಂದಾಗಿರುವ ಕೇಂದ್ರ ಸರ್ಕಾರ ಸಾಮಾಜಿಕ ಮಾಧ್ಯಮಗಳ ಮಧ್ಯವರ್ತಿಗಳಿಗೆ ಸಲಹೆ ನೀಡಿದೆ. ಸರ್ಕಾರದ ಈ ಸಲಹೆಗಳನ್ನು ಗಂಭೀರವಾಗಿ ಪರಿಗಣಿಸಬೇಕು, ತಪ್ಪು ಮಾಹಿತಿ ಹರಡದಂತೆ ಸದಾ ಗಮನವಹಿಸಬೇಕು. ಸಾಮಾಜಿಕ ಮಾಧ್ಯಮಗಳಲ್ಲಿ ತಪ್ಪು ಸಂದೇಶ, ಮಾಹಿತಿ, ನಕಲಿ ಫೋಟೋ–ವಿಡಿಯೋಗಳ ಗುರುತಿಸಲು ಸಮಂಜಸವಾದ ಪ್ರಯತ್ನಗಳನ್ನು ಮಾಡಬೇಕು ಎಂದಿದೆ.

ಒಂದು ವೇಳೆ ಇಂತ ಸನ್ನಿವೇಶಗಳನ್ನು ತಡೆಯುವಲ್ಲಿ ವಿಫಲವಾದರೆ ಗಂಭೀರ ಪರಿಣಾಮ ಎದುರಿಸಬೇಕಾಗುತ್ತದೆ ಎಂದಿರುವ ಕೇಂದ್ರ, ಐಟಿ ನಿಯಮಗಳು–2021ರ ಪ್ರಕಾರ ನಕಲಿ, ತಪ್ಪು ಮಾಹಿತಿಯ ಪೋಸ್ಟ್‌ಗಳ ವಿರುದ್ಧ ಕ್ರಮ ಕೈಗೊಳ್ಳಬೇಕು. ತಪ್ಪು ಮಾಹಿತಿ ಅಥವಾ ವಿಷಯ ಹೋಸ್ಟ್ ಮಾಡದಂತೆ ಬಳಕೆದಾರರನ್ನು ತಡೆಯಲು ಸೂಚನೆ ಇದೆ. ಇಂತವುಗಳು ಕಂಡುಬಂದಲ್ಲಿ 36 ಗಂಟೆಗಳ ಒಳಗೆ ತೆಗೆದುಹಾಕಬೇಕು ಎಂಬ ನಿಯಮವಿದ್ದು, ಇದನ್ನು ಎಲ್ಲ ಸಾಮಾಜಿಕ ಮಾಧ್ಯಮಗಳು ಪಾಲಿಸಬೇಕು.

ಐಟಿ ಕಾಯಿದೆ ಮತ್ತು ನಿಯಮಗಳ ಸಂಬಂಧಿತ ನಿಬಂಧನೆಗಳ ಪ್ರಕಾರ ಕಾರ್ಯನಿರ್ವಹಿಸಲು ವಿಫಲವಾದರೆ, ಮಾಹಿತಿ ತಂತ್ರಜ್ಞಾನ ಕಾಯಿದೆ, 2000ರ ಸೆಕ್ಷನ್ 79(1) ಅಡಿಯಲ್ಲಿ ಲಭ್ಯವಿರುವ ರಕ್ಷಣೆಯನ್ನು ಆಯಾ ಸಂಸ್ಥೆಗಳು ಕಳೆದುಕೊಳ್ಳುತ್ತವೆ.

– ಅಲೆಮಾರಿ.

## ನಾನು ಯಾವುದೇ ಹುದ್ದೆಗೆ ಡಿಮ್ಯಾಂಡ್ ಮಾಡಿಲ್ಲ: ಸತೀಶ್ ಜಾರಕಿಹೊಳಿ



■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ಡಿಸಿಎಂ ಡಿ.ಕೆ.ಶಿವಕುಮಾರ್ ಜೊತೆ ಹೊಂದಾಣಿಕೆ ಆಗುವ ಪ್ರಶ್ನೆಯೇ ಇಲ್ಲ ಎಂದು ಬೆಳಗಾವಿಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಕಡ್ಡಿ ಮುರಿದಂತೆ ಹೇಳಿದ್ದಾರೆ. ಪಕ್ಷದ ಹಂತದಲ್ಲಿ ಚರ್ಚೆ ಆಗಬೇಕು ನಮ್ಮ ಹಂತದಲ್ಲಿ ಏನೂ ಇಲ್ಲ. ನಾನು ಯಾವುದೇ ಹುದ್ದೆಯ ಕ್ಲೈಮ್ ಮತ್ತು ಡಿಮ್ಯಾಂಡ್ ಮಾಡಿಲ್ಲ. ಡಿಸಿಎಂ ಡಿ.ಕೆ.ಶಿವಕುಮಾರ್ ನಮ್ಮ ನಿವಾಸಕ್ಕೆ ಹಲವು ಬಾರಿ ಬಂದಿದ್ದಾರೆ.

ಪಕ್ಷದ ವಿಚಾರ ಮತ್ತು ಅಭಿವೃದ್ಧಿ ವಿಚಾರದ ಕುರಿತು ಚರ್ಚೆ ಆಗಿದೆ. ಮೈಸೂರಿಗೆ ಹೋಗುವ ಉದ್ದೇಶ ಬೇರೆ, ಡಿಕೆ ಭೇಟಿಯಾದ ಉದ್ದೇಶ ಬೇರೆ. ಅಡ್ಜಸ್ಟ್‌ಮೆಂಟ್ ಎನ್ನುವ ಪ್ರಶ್ನೆ ಇಲ್ಲ. ಲೋಕಸಭೆ ಚುನಾವಣೆಯಾದ ಬಳಿಕ ಚರ್ಚೆಗೆ ಬರಬಹುದು. ಚುನಾವಣೆ ಬಳಿಕ ಯಾವ ಹೊಸ ವಿಚಾರ ಬರುತ್ತಾವೆಂದು ಕಾದುನೋಡೋಣ ಎಂದರು.

## ಪಂಚ ರಾಜ್ಯದ ಚುನಾವಣೆ ಫಲಿತಾಂಶ ಕಾಂಗ್ರೆಸ್ ಪರವಾಗಿ ಇರಲಿದೆ: ಜಗದೀಶ್ ಶೆಟ್ಟರ್



■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಬಿಜೆಪಿಯವರು ಸಾಕಷ್ಟು ಭ್ರಮೆಯಲ್ಲಿದ್ದಾರೆ, ಈಗಾಗಲೇ ಬೇರೆ ಕಡೆ ಆಪರೇಷನ್ ಕಮಲ ಮಾಡಲು ಹೋಗಿ ಕೈ ಸುಟ್ಟುಕೊಂಡಿದ್ದಾರೆ ಎಂದು ಹುಬ್ಬಳ್ಳಿಯಲ್ಲಿ ಮಾಜಿ ಸಿಎಂ ಜಗದೀಶ್ ಶೆಟ್ಟರ್ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 50–60 ಶಾಸಕರನ್ನು ಕರೆದುಕೊಂಡು ಬಂದು ಮತ್ತೆ ಸರ್ಕಾರ ರಚನೆ ಮಾಡುವ ಭ್ರಮೆಯಲ್ಲಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷರ ಆಯ್ಕೆ ಹಿಂದೆ ಏನೆ ಕಾರಣ ಇರಲಿ, ಅದಕ್ಕೆ ಜನ ಉತ್ತರ ನೀಡುತ್ತಾರೆ. ಈಗ ಸಿದ್ದರಾಮಯ್ಯ ಮುಖ್ಯ ಮಂತ್ರಿ ಇದ್ದಾರೆ. ಪವರ್ ಶೇರಿಂಗ್ ಬಗ್ಗೆ ಯಾರೋ ಮಾತನಾಡುತ್ತಾರೆ ಅಂತಾ ಚರ್ಚೆ ಮಾಡುವುದು ಸರಿಯಲ್ಲಾ. ಅದು ಬರೀ ಚರ್ಚೆ ಆಗುತ್ತೆ.

ಪಂಚ ರಾಜ್ಯದ ಚುನಾವಣೆ ಫಲಿತಾಂಶ ಕಾಂಗ್ರೆಸ್ ಪರವಾಗಿ ಇರಲಿದೆ ಎಂದು ಶೆಟ್ಟರ್ ಹೇಳಿದರು. ಇನ್ನೂ ವಿಜಯೇಂದ್ರ ರಾಜಾಧ್ಯಕ್ಷರಾಗಿ ಆಯ್ಕೆ ಆಗಿರುವ ಬಗ್ಗೆ ಮಾತನಾಡಿದ ಶೆಟ್ಟರ್, ಇವಗ್ಯಾಕೆ ಬಿಜೆಪಿ ರಾಜ್ಯಾಧ್ಯಕ್ಷ ಆಯ್ಕೆ ಆಯ್ತು, ಏನೋ ಅತ್ತು ಕರೆದು ಮಾಡಿರೋ ತರಹ ಕಾಣತ್ತೆ ಎಂದು ವ್ಯಂಗ್ಯವಾಡಿದರು.

ಕಳೆದ ಆರು ತಿಂಗಳಿಂದ ಬಿಜೆಪಿ ನಾಯಕನ ಆಯ್ಕೆ ಮಾಡಿರಲಿಲ್ಲ, ರಾಜಕೀಯ ಪಕ್ಷ ಆಗಿ ತಕ್ಷಣವೇ ರಾಜ್ಯಾಧ್ಯಕ್ಷರ ಆಯ್ಕೆ ಮಾಡಬೇಕಿತ್ತು. ಆದ್ರೆ ಇವಗ್ಯಾಕೆ ಆಯ್ಕೆ ಮಾಡಿದ್ರು? ಬಿಜೆಪಿ ಫೇಲ್ ಆಗಿದೆ ಎಂದು ಮಾಜಿ ಸಿಎಂ ಜಗದೀಶ್ ಶೆಟ್ಟರ್ ಹೇಳಿದರು.

## ಪಟಾಕಿ ಮಳಿಗೆಗಳ ಪರಿಶೀಲನೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಜ್ಯದಲ್ಲಿ ಪಟಾಕಿ ಸ್ಫೋಟದಿಂದ ಉಂಟಾದ ಅವಘಡದಿಂದ ಎಚ್ಚೆತ್ತಿರುವ ಸರ್ಕಾರ, ಅಧಿಕಾರಿಗಳಿಗೆ ದೀಪಾವಳಿ ಮುನ್ನಾದಿನ ಪಟಾಕಿ ಅಂಗಡಿಗಳಿಗೆ ಭೇಟಿ ಪರಿಶೀಲಿಸುವಂತೆ ನಿರ್ದೇಶನ ನೀಡಿದೆ.

ಈ ಹಿನ್ನೆಲೆಯಲ್ಲಿ, ಶುಕ್ರವಾರ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರ ಮಂಡಳಿಯ ಗದಗ ಜಿಲ್ಲಾ ಉಪ ಪರಿಸರ ಅಧಿಕಾರಿ ರೋಹಿತ್ ಕುಮಾರ್ ಪಿ.ಜೆ ಮತ್ತು ಪುರಸಭೆ ಮುಖ್ಯಾಧಿಕಾರಿ ಶಂಕರ ಹುಲ್ಲಮ್ಮನವರ ನೇತೃತ್ವದಲ್ಲಿ ಪಟಾಕಿ ಅಂಗಡಿಗಳನ್ನು ಪರಿಶೀಲಿಸಲಾಯಿತು.

ಈ ವೇಳೆ ಪಟಾಕಿ ಮಾರಾಟಗಾರರಿಗೆ ಸರ್ಕಾರ ಮಾರ್ಗಸೂಚಿಯನ್ವಯ ನಿಷೇಧಿತ ಪಟಾಕಿಗಳನ್ನು ಮಾರದಂತೆ ಮತ್ತು ಯಾವುದೇ ಅವಘಡ ಉಂಟಾಗದಂತೆ ಮುಂಜಾಗೃತಾ ಕ್ರಮ ಕೈಗೊಳ್ಳಬೇಕು, ಮಾರ್ಗಸೂಚಿ ಉಲ್ಲಂಘಿಸಿದರೆ ಕ್ರಮ ಕೈಗೊಳ್ಳಲಾಗುವುದು ಎಂದು ಸೂಚಿಸಿದರು.

ಈ ವೇಳೆ ಸಿಕ್ಕ ನಿಷೇಧಿತ ಪಟಾಕಿಗಳನ್ನು ವಶಕ್ಕೆ ಪಡೆದರು. ಪುರಸಭೆ ಆರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್ ಹಾಗೂ ಪುರಸಭೆ ಸಿಬ್ಬಂದಿಗಳಿದ್ದರು.

## ಸೆಮಿಫೈನಲ್ ಪಂದ್ಯಗಳನ್ನು ಪ್ರಕಟಿಸಿದ ಐಸಿಸಿ!

■ ವಿಜಯಸಾಕ್ಷಿ ಸುದ್ದಿ, ಮುಂಬೈ

ಅಕ್ಟೋಬರ್ 5 ರಿಂದ ಭಾರತದ ಆತಿಥ್ಯದಲ್ಲಿ ನಡೆಯುತ್ತಿರುವ ಐಸಿಸಿ ಏಕದಿನ ವಿಶ್ವಕಪ್ 2023 ಟೂರ್ನಿ ಈಗ ನಿರ್ಣಾಯಕ ಹಂತಕ್ಕೆ ಬಂದಿದ್ದು, ಸೆಮಿಫೈನಲ್ ಕದನದ ವಿವರವನ್ನು ಐಸಿಸಿ ಅಧಿಕೃತವಾಗಿ ಪ್ರಕಟಿಸಿದೆ.

ಆರಂಭದಿಂದ ಇಲ್ಲಿಯವರೆಗೂ ಒಂದು ಪಂದ್ಯವನ್ನು ಸೋಲದೆ ಪಟ್ಟಿಯಲ್ಲಿ ಅಗ್ರ ಸ್ಥಾನದಲ್ಲಿರುವ ಭಾರತ, ದಕ್ಷಿಣ ಆಫ್ರಿಕಾ, ಆಸ್ಟ್ರೇಲಿಯಾ ಮತ್ತು ನ್ಯೂಜಿಲೆಂಡ್ ತಂಡಗಳು ಸೆಮಿಫೈನಲ್ ಪಂದ್ಯದಲ್ಲಿ ಕಾದಾಟ ನಡೆಸಲಿವೆ. ಪಟ್ಟಿಯಲ್ಲಿ ನಾಲ್ಕನೇ ಸ್ಥಾನ ಪಡೆಯುವಲ್ಲಿ ಪಾಕಿಸ್ತಾನ ವಿಫಲವಾಗಿದ್ದು, ಮನೆ ಕಡೆ ಹೋಗುವುದು ಖಚಿತವಾಗಿದೆ.

ಕೋಲ್ಕತ್ತಾದಲ್ಲಿ ನಡೆಯುತ್ತಿರುವ ಇಂದಿನ ಪಂದ್ಯದಲ್ಲಿ ಪಾಕಿಸ್ತಾನ ವಿರುದ್ಧ ಇಂಗ್ಲೆಂಡ್ 337 ರನ್ ಗಳ ಬೃಹತ್ ಮೊತ್ತ ಪೇರಿಸಿದ್ದರಿಂದ ಪಾಕಿಸ್ತಾನ ಸೆಮಿಫೈನಲ್ ಪ್ರವೇಶವನ್ನು ತಪ್ಪಿಸಿಕೊಂಡಿತು.

## ರಾಜ್ಯಾಧ್ಯಕ್ಷ ಸ್ಥಾನಕ್ಕೆ ಬಿ.ವೈ ವಿಜಯೇಂದ್ರ ಆಯ್ಕೆ: ಮಾಜಿ ಶಾಸಕ ಶ್ರೀರಾಮುಲು ಹೇಳಿದ್ದೇನು..?



■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಪಕ್ಷದ ರಾಜ್ಯಾಧ್ಯಕ್ಷ ಸ್ಥಾನಕ್ಕೆ ಬಿ.ವೈ ವಿಜಯೇಂದ್ರ ಆಯ್ಕೆಯಾಗಿರುವುದರಿಂದ ಉಳಿದ ಆಕಾಂಕ್ಷಿಗಳಿಗೆ ನಿರಾಸೆಯಾಗುವುದು ಸಹಜ. ಆದರೆ ಅವರ ಆಯ್ಕೆಯಿಂದ ನಮಗೂ ಖುಷಿ ಇದೆ ಎಂದು ಬಿಜೆಪಿ ಮಾಜಿ ಶಾಸಕ ಶ್ರೀರಾಮುಲು ಹೇಳಿದ್ದಾರೆ. ಬೆಂಗಳೂರಿನ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರೊಂದಿಗೆ ಮಾತನಾಡಿದ ಅವರು, ಬಿಜೆಪಿ ರಾಜ್ಯಾಧ್ಯಕ್ಷರಾಗಿ ಆಯ್ಕೆಯಾದ ಬಿ.ವೈ ವಿಜಯೇಂದ್ರ ವಿಚಾರವಾಗಿ ಅವರು ಪ್ರತಿಕ್ರಿಯಿಸಿದ್ದಾರೆ.

ಈ ವೇಳೆ ಪಕ್ಷದ ರಾಷ್ಟ್ರ ನಾಯಕರು ವಿಜಯೇಂದ್ರ ಅವರನ್ನು ಪಕ್ಷದ ಅಧ್ಯಕ್ಷ ಸ್ಥಾನಕ್ಕೆ ಆಯ್ಕೆ ಮಾಡಿದ್ದಾರೆ. ಇದರಿಂದ ನಮಗೂ ಖುಷಿಯಾಗಿದೆ. ಆ ಸ್ಥಾನದ ನಿರೀಕ್ಷೆಯಲ್ಲಿದ್ದವರಿಗೆ ನಿರಾಸೆಯಾಗುವುದು ಸಾಮಾನ್ಯ ಎಂದಿದ್ದಾರೆ. ವಿಜಯೇಂದ್ರ ಅವರು ಯಡಿಯೂರಪ್ಪ ಗರಡಿಯಲ್ಲಿ ಪಳಗಿದ್ದಾರೆ. ಅವರಿಗೆ ನಮ್ಮ ಸಂಪೂರ್ಣ ಸಹಕಾರ ಇರಲಿದೆ. ಅವರೊಟ್ಟಿಗೆ ಸೇರಿ ಕೆಲಸ ಮಾಡಿ ಪಕ್ಷ ಸಂಘಟನೆ ಮಾಡಬೇಕಿದೆ ಎಂದು ಶ್ರೀರಾಮುಲು ಹೇಳಿದ್ದಾರೆ.

## ಬಸವೇಶ್ವರ ಕಾಲೇಜಿನ ಬಿ.ಎಸ್ಸಿ ವಿದ್ಯಾರ್ಥಿಗಳ ಸಾಧನೆ







■ ವಿಜಯಸಾಕ್ಷಿ ಸುದ್ದಿ, ಗದಗ

ಸ್ಥಳೀಯ ಜ. ತೋಂಟದಾರ್ಯ ವಿದ್ಯಾಪೀಠದ ಬಸವೇಶ್ವರ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯದಲ್ಲಿ ಆಗಸ್ಟ್ 2023ರಲ್ಲಿ ನಡೆದ ಬಿ.ಎಸ್ಸಿ 6ನೇ ಸೆಮಿಸ್ಟರ್ ಪರೀಕ್ಷೆಯಲ್ಲಿ ಶೇ 89ರಷ್ಟು ಫಲಿತಾಂಶ ಪಡೆದಿದೆ.

ಸಹನಾ ಮನ್ನಮ್ಮನವರ ಕಾಲೇಜಿಗೆ ಪ್ರಥಮ, ಪ್ರಸಾದ ಪೂಜಾರ ದ್ವಿತೀಯ ಹಾಗೂ ಅಕ್ಷತಾ ಪೂಜಾರ ತೃತೀಯ ಸ್ಥಾನ ಪಡೆದು ಮಹಾವಿದ್ಯಾಲಯಕ್ಕೆ ಕೀರ್ತಿ ತಂದಿರುತ್ತಾರೆ. ಈ ವಿದ್ಯಾರ್ಥಿಗಳನ್ನು ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿಗಳಾದ ಎಸ್.ಎಸ್. ಪಟ್ಟಣಶೆಟ್ಟಿ, ಕಾಲೇಜಿನ ಆಡಳಿತ ಮಂಡಳಿಯ ಸರ್ವ ಸದಸ್ಯರು, ಪ್ರಾ. ಎಂ.ಎಂ. ಬುರಡಿ ಹಾಗೂ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

### ಉಮಾ ವಿದ್ಯಾಲಯ ಹೈಸ್ಕೂಲ್‌ನಲ್ಲಿ 'ಸ್ವಚ್ಛ ದೀಪಾವಳಿ–ಶುಭ ದೀಪಾವಳಿ' ಪ್ರಮಾಣ ಸ್ವೀಕಾರ

# ಪರಿಸರ ಸ್ನೇಹಿ ದೀಪಾವಳಿ ಆಚರಿಸೋಣ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೀಪಾವಳಿ ಹಬ್ಬವನ್ನು ಹಸಿರು ಪಟಾಕಿ ಹಚ್ಚುವ ಮೂಲಕ ಪರಿಸರ ಸ್ನೇಹಿಯಾಗಿ, ಸರಳವಾಗಿ, ಪ್ಲಾಸ್ಟಿಕ್ ಮುಕ್ತ ಹಾಗೂ ಮಾಲಿನ್ಯರಹಿತವಾಗಿ ಆಚರಿಸಲು ಮುಂದಾಗಬೇಕು ಎಂದು ಪುರಸಭೆ ಕಚೇರಿ ವ್ಯವಸ್ಥಾಪಕಿ ಮಂಜುಳಾ ಹೂಗಾರ ಹೇಳಿದರು.

ಅವರು ಪೌರಾಡಳಿತ ನಿರ್ದೇಶನಾಲಯ, ಜಿಲ್ಲಾಡಳಿತ, ಜಿಲ್ಲಾ ನಗರಾಭಿವೃದ್ಧಿ ಕೋಶ ಗದಗ ಹಾಗೂ ಪುರಸಭೆ ವತಿಯಿಂದ 'ಸ್ವಚ್ಛ ದೀಪಾವಳಿ–ಶುಭ ದೀಪಾವಳಿ' ಅಭಿಯಾನವನ್ನು ಪಟ್ಟಣದ ಪುರಸಭೆಯ ಉಮಾ ವಿದ್ಯಾಲಯ ಹೈಸ್ಕೂಲ್‌ನಲ್ಲಿ ಶುಕ್ರವಾರ ನೆರವೇರಿಸಿ ಮಾತನಾಡಿದರು.

ಈ ವೇಳೆ ಶಿಕ್ಷಕಿ ಜಯಶ್ರೀ ಬಳ್ಳಾರಿ ವಿದ್ಯಾರ್ಥಿಗಳಿಗೆ ಪರಿಸರ ಸ್ನೇಹಿ ಸ್ಥಳೀಯ ಉತ್ಪನ್ನಗಳನ್ನು ಬಳಸುತ್ತೇನೆ, ಏಕಬಳಕೆಯ ಪ್ಲಾಸ್ಟಿಕ್ ಬಳಸುವದಿಲ್ಲ, ಹಸಿರು ಪಟಾಕಿ ಉಪಯೋಗಿಸುತ್ತೇನೆ, ಪಟಾಕಿ ಹೊಡೆದು ವಾತಾವರಣದ ಮೇಲೆ ಪರಿಣಾಮ ಬೀರುವಂತೆ ಮಾಡುವದಿಲ್ಲ ಮತ್ತು ಪರಿಸರ ಸ್ನೇಹಿ, ಸ್ವಚ್ಛ ದೀಪಾವಳಿ–ಶುಭ ದೀಪಾವಳಿ ಆಚರಿಸುತ್ತೇನೆ ಎಂದು ಪ್ರಮಾಣವನ್ನು ಬೋಧಿಸಿದರು.

ದೀಪಾವಳಿ ಹಬ್ಬದ ಸಂದರ್ಭದಲ್ಲಿ ಸಿಡಿಸುವ ಪಟಾಕಿಗಳು ಶಬ್ದಮಾಲಿನ್ಯ ಮತ್ತು ವಾಯುಮಾಲಿನ್ಯದಿಂದ ಪರಿಸರಕ್ಕೆ ಹಾನಿಯಾಗಲಿದೆ. ಜನರ ಆರೋಗ್ಯದ ಮೇಲೆ ಪರಿಣಾಮ ಬೀರುತ್ತದೆ ಮತ್ತು ಪ್ರಾಣಿ– ಪಕಿಗಳಿಗೂ ತೊಂದರೆ ಉಂಟಾಗಲಿದೆ. ಸುಪ್ರೀಂಕೋರ್ಟ್ ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ದೀಪಾವಳಿ ಹಬ್ಬದ ಆಚರಣೆ ವೇಳೆ ಹಸಿರು ಪಟಾಕಿಗಳನ್ನು ಮಾತ್ರವೇ ಬಳಸಬೇಕು ಎಂದು ಆದೇಶಿಸಿದ್ದು, ಇದರೊಂದಿಗೆ ಏಕಬಳಕೆ ಪ್ಲಾಸ್ಟಿಕ್ ಬಳಸದಂತೆ ಎಚ್ಚರಿಕೆ ವಹಿಸಬೇಕೆಂದು ಮನವಿ ಮಾಡಿದರು.

ಮುಖ್ಯೋಪಾಧ್ಯಾಯ ಎಸ್.ಎಚ್. ಪೂಜಾರ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ನಮ್ಮ ಪರಿಸರದ ಮೇಲೆ ದಾಳಿಗಳು ಹೆಚ್ಚಾಗುತ್ತಿವೆ. ಈ ಹಿನ್ನೆಲೆಯಲ್ಲಿ ಸರಕಾರ ಹಮ್ಮಿಕೊಂಡಿರುವ ಈ ಅಭಿಯಾನಕ್ಕೆ ಎಲ್ಲರೂ ಕೈ ಜೋಡಿಸುವದು ಅಗತ್ಯವಾಗಿದೆ. ನಮ್ಮ ಪರಿಸರವನ್ನು ಕಾಪಾಡುವದರಿಂದ ನಮ್ಮ ಆರೋಗ್ಯವು ಉತ್ತಮವಾಗಿರಲು ಸಾಧ್ಯವಾಗುತ್ತದೆ. ದೀಪಾವಳಿಯನ್ನು ಎಲ್ಲರೂ ಶುಭವಾಗಿ ಮಾಡೋಣ, ಪ್ಲಾಸ್ಟಿಕ್ ಮುಕ್ತ ಪರಿಸರ ಸೃಷ್ಟಿಯಾಗುವಂತೆ ಮಾಡುವದಕ್ಕೆ ಎಲ್ಲರೂ ಪಣ ತೊಡೋಣ ಎಂದರು.

ಪುರಸಭೆ ಕಿರಿಯ ಆರೋಗ್ಯ ಸಹಾಯಕ ಮಂಜುನಾಥ ಮುದಗಲ್, ಸಿಬ್ಬಂದಿಗಳು, ಶಿಕ್ಷಕರು ಇದ್ದರು. ಆರ್.ಎಫ್. ದೊಡ್ಡಮನಿ ನಿರೂಪಿಸಿದರು.

### ರೈತ ಉತ್ಪಾದಕರ ಸಂಘಗಳ ಬಲವರ್ಧನೆ, ಕೃಷಿಯಲ್ಲಿ ವಿನೂತನ ತಾಂತ್ರಿಕತೆಗಳ ಕುರಿತು ತರಬೇತಿ

# ಕೃಷಿ ವಿಜ್ಞಾನ ಕೇಂದ್ರದಿಂದ ರೈತರಿಗೆ ಮಾರ್ಗದರ್ಶನ



■ ವಿಜಯಸಾಕ್ಷಿ ಸುದ್ದಿ, ಗದಗ

ಐಸಿಎಆರ್–ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರ, ಹುಲಕೋಟಿಯಲ್ಲಿ ರೈತ ಉತ್ಪಾದಕರ ಸಂಘಗಳ ಬಲವರ್ಧನೆ ಹಾಗೂ ಕೃಷಿಯಲ್ಲಿ ವಿನೂತನ ತಾಂತ್ರಿಕತೆಗಳ ಕುರಿತು ಒಂದು ದಿನದ ತರಬೇತಿಯನ್ನು ನ.9ರಂದು ಹಮ್ಮಿಕೊಳ್ಳಲಾಗಿತ್ತು.

ಒಟ್ಟು 10 ರೈತ ಉತ್ಪಾದಕರ ಸಂಘಗಳಿಂದ 28 ಜನ ನಿರ್ದೇಶಕರು ಈ ತರಬೇತಿಯಲ್ಲಿ ಭಾಗವಹಿಸಿದ್ದರು. ಐಸಿಎಆರ್–ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರದ ನಿವೃತ್ತ ವಿಜ್ಞಾನಿ ಎಸ್.ಎಚ್. ಆದಾಪೂರ ರೈತ ಉತ್ಪಾದಕರ ಸಂಘಗಳ ಬೆಳವಣಿಗೆ, ಅಭಿವೃದ್ಧಿ, ಸಮಸ್ಯೆಗಳ ಪರಿಹಾರ ಹಾಗೂ ಇನ್ನಿತರ ವಿಷಯಗಳ ಕುರಿತು ತರಬೇತಿ ನೀಡಿದರು. ಕೇಂದ್ರದ ವಿಷಯ ತಜ್ಞ (ಕೃಷಿ ಇಂಜಿನಿಯರಿಂಗ್) ಡಾ. ವಿನಾಯಕ ನಿರಂಜನ ಕಸ್ಟಮ್ ಹೈಯರಿಂಗ್ ಸೆಂಟರ್ ಕುರಿತು ಮಾಹಿತಿ ತಿಳಿಸಿ, ನಿರ್ವಹಣೆ ಹಾಗೂ ಕೃಷಿಯಲ್ಲಿ ವಿವಿಧ ಯಂತ್ರೋಪಕರಣಗಳು ಹಾಗೂ ಅವುಗಳ ಉಪಯೋಗ ಕುರಿತು ಮಾಹಿತಿ ನೀಡಿದರು.

ವಿಷಯ ತಜ್ಞರಾದ ಹೇಮಾವತಿ ರ.ಹಿರೇಗೌಡರ, ತೋಟಗಾರಿಕೆ ಬೆಳೆಯಲ್ಲಿ ವಿನೂತನ ತಾಂತ್ರಿಕತೆಗಳ ಕುರಿತು ಮಾಹಿತಿ ನೀಡಿದರು. ಕೇಂದ್ರದಲ್ಲಿ ಎಣ್ಣೆ ಸಂಸ್ಕರಣಾ ಘಟಕ, ಸಿರಿಧಾನ್ಯಗಳ ಸಂಸ್ಕರಣಾ ಘಟಕ ಹಾಗೂ ಸಾವಯವ ಪ್ರಾತ್ಯಕ್ಷಿಕೆ ಘಟಕಗಳಿಗೆ ಭೇಟಿ ನೀಡಲಾಯಿತು. ಹುಲಕೋಟಿಯ ರೈತ ಉತ್ಪಾದಕರ ಸಂಘದ ನಿರ್ದೇಶಕರೊಂದಿಗೆ ಚರ್ಚೆ ಹಾಗೂ ಸಂವಾದವನ್ನು ಏರ್ಪಡಿಸಲಾಯಿತು.

ಈ ತರಬೇತಿ ಅವಧಿಯಲ್ಲಿ ಅವಿನಾಶ ಹಂಪಳ್ಳಿ, ಅಪೂರ್ವ ಏಜೆನ್ಸಿ, ದಾವಣಗೆರೆ ವತಿಯಿಂದ ರೈತ ಉತ್ಪಾದಕರ ಸಂಸ್ಥೆಗಳ ಮೂಲಕ ಗೋವಿನ ಜೋಳ, ಕಡಲೆ ಹಾಗೂ ಸೋಯಾಬೀನ್‌ಗಳನ್ನು ತಮ್ಮ ಕಂಪನಿಯು ಖರೀದಿಸುತ್ತಿದ್ದು, ಇದರಿಂದ ತಮ್ಮ ಗ್ರಾಮದ ರೈತರಿಗೆ ಹಾಗೂ ರೈತ ಉತ್ಪಾದಕರ ಸಂಘಗಳಿಗೆ ನೆರವಾಗುವುದು ಎಂದು ತಿಳಿಸಿದರು.

ಕೇಂದ್ರದ ಹಿರಿಯ ವಿಜ್ಞಾನಿಗಳು ಹಾಗೂ ಮುಖ್ಯಸ್ಥರು (ಪ್ರಭಾರಿ) ಡಾ. ಸುಧಾ ಮಂಕಣಿ ಮಾತನಾಡಿ, ರೈತ ಉತ್ಪಾದಕರ ಸಂಘಗಳಿಂದ ಕೃಷಿ ಮೌಲ್ಯವರ್ಧನೆಯನ್ನು ಕೈಗೊಳ್ಳಲು ಸಾಕಷ್ಟು ಅವಕಾಶಗಳಿವೆ. ಇದರಿಂದ ಸ್ವ–ಸಹಾಯ ಸಂಘದ ಮಹಿಳೆಯರಿಗೂ ಕೂಡಾ ಆರ್ಥಿಕವಾಗಿ ನೆರವಾಗುವುದು. ಈ ನಿಟ್ಟಿನಲ್ಲಿ ನಮ್ಮ ಕೇಂದ್ರವು ತಮಗೆ ಮಾರ್ಗದರ್ಶನ ಮಾಡುವುದು ಎಂದು ತಿಳಿಸಿದರು.

# ಬೆಳಕಿನ ಹಬ್ಬಕ್ಕೆ ಸಂಭ್ರಮದ ತಯಾರಿ

▶▶ಮೊದಲನೇ ಪುಟದಿಂದ



ಮಣ್ಣಿನ ಹಣತೆಯೊಂದಕ್ಕೆ 5ರಿಂದ 15 ರೂ. ದರವಿದ್ದರೆ, ಪಿಂಗಾಣಿ ದೀಪಗಳು 25ರಿಂದ 50 ರೂ. ವರೆಗೆ ದರ ಪಡೆದುಕೊಳ್ಳುತ್ತಿವೆ.

ಇವಿಷ್ಟೇ ಅಲ್ಲದೆ, ಚೆಂಡು ಹೂವು, ಸೇವಂತಿಗೆ ಹೂವಿನ ಮಾರಾಟವೂ ಜೋರಾಗಿದ್ದು, ಬೆಳೆಯ ಕೊರತೆಯಿಂದ ಹೂವಿನ ಬೆಲೆ ಏರಿಕೆ ಕಂಡಿದೆ. ಚಿನ್ನ, ಕಾರು, ಬೈಕು, ಇಲೆಕ್ಟ್ರಾನಿಕ್ಸ್ ವಸ್ತುಗಳ ಖರೀದಿಗೆ ಜನ ಹೆಚ್ಚು ಆಸಕ್ತಿ ತೋರುತ್ತಿದ್ದಾರೆ. ಕಾರಿಗೆ ಹೆಚ್ಚಿನ ಬೇಡಿಕೆ ಕಂಡು ಬರುತ್ತಿದೆಯಾದರೂ ಬೇಡಿಕೆಗೆ ತಕ್ಕಂತೆ ಕಾರುಗಳು ಸಿಗುತ್ತಿಲ್ಲ.

ಚಿನ್ನದ ಖರೀದಿಗೆ ಗ್ರಾಹಕರು ಮುಗಿ ಬೀಳುತ್ತಿದ್ದಾರೆ. ಕಳೆದೊಂದು ವಾರದಿಂದಲೂ ಚಿನ್ನದ ಅಂಗಡಿಗಳಲ್ಲಿ ಖರೀದಿದಾರರ ದಟ್ಟಣೆ ಕಡಿಮೆಯಾಗುತ್ತಿಲ್ಲ. ಟಿವಿ, ಫ್ರಿಡ್ಜ್, ವಾಶಿಂಗ್ ಮಶಿನ್ ಸೇರಿದಂತೆ ಗೃಹೋಪಯೋಗಿ ವಸ್ತುಗಳ ವ್ಯಾಪಾರವೂ ಜೋರಾಗಿದೆ ಎನ್ನುತ್ತಾರೆ ವ್ಯಾಪಾರಿಗಳು.

# ಕರ್ನಾಟಕ ಏಕೀಕರಣದ ತವರು ನೆಲ ಗದಗ

▶▶ಮೊದಲನೇ ಪುಟದಿಂದ

ಪ್ರಾಸ್ತಾವಿಕ ನುಡಿದ ಕಸಾಪ ತಾಲೂಕಾಧ್ಯಕ್ಷ ಈಶ್ವರ ಮೆಡ್ಲೇರಿ, ನಾವಿಂದು ನವೆಂಬರ್ ತಿಂಗಳ ಕನ್ನಡ ಅಭಿಮಾನಿಗಳಾಗದೇ ನಂಬರ್ ಒನ್ ಕನ್ನಡಿಗರಾಗಬೇಕಾಗಿದೆ. ಅದಕ್ಕಾಗಿ ನಮ್ಮ ನಡುವೆಯೇ ಸಾಧಿಸಿ ಶ್ರೇಷ್ಠರಾದ ಅಂದಾನಪ್ಪ ದೊಡ್ಡಮೇಟಿ, ಸಿ.ಎನ್. ಪಾಟೀಲರಂತವರು ದೊಡ್ಡ ಪ್ರೇರಣೆ. ಕರ್ನಾಟಕ ನಾಮಕರಣ 50ರ ಸಂಭ್ರಮದ ಕಾರ್ಯಕ್ರಮಗಳನ್ನು ಕಸಾಪ ಲಕ್ಷ್ಮೇಶ್ವರ ತಾಲೂಕ ಘಟಕ ವರ್ಷಪೂರ್ತಿ ಹಮ್ಮಿಕೊಳ್ಳುತ್ತಿದೆ ಎಂದರು.

ಜಿಗಳೂರ, ಶೇಖರ ಚಿಕ್ಕಣ್ಣವರ, ಎಲ್.ಎಚ್. ಅವ್ವಣ್ಣವರ, ಎಸ್.ಎ. ಗೊರವನಕೊಳ್ಳ, ಎಸ್.ಎ. ಶೇಖ್, ಅಸ್ವದ್ ತಾಡಪತ್ರಿ, ನಾಗರಾಜ ಪೂಜಾರ, ಪ್ರವೀಣ ಮೂಲಿಮನಿ, ಯಲ್ಲಪ್ಪ ತಿರಕಣ್ಣವರ, ಎಸ್.ಎಸ್. ಅಂಗಡಿ ಮುಂತಾದವರಿದ್ದರು.

ಕಸಾಪ ಗೌರವ ಕಾರ್ಯದರ್ಶಿ ಮಂಜುನಾಥ ಚಾಕಲಬ್ಬಿ, ಮಂಜುನಾಥ ಹುಣಸಿಮರದ, ಬಿ.ಜಿ. ಕನವಳ್ಳಿ ನಿರೂಪಿಸಿದರು.



ಬೆಟಗೇರಿಯ ಮಹಾರಾಣಾ ಪ್ರತಾಪಸಿಂಹ ಶಿಕ್ಷಣ ಸಂಸ್ಥೆಯ ಪ್ರೌಢಶಾಲೆಯಲ್ಲಿ ರಾಷ್ಟ್ರೀಯ ಶಿಕ್ಷಣ ದಿನವನ್ನು ಆಚರಿಸಲಾಯಿತು. ಪ್ರಭಾರ ಮುಖ್ಯಾಧ್ಯಾಪಕ ಎಚ್.ಎಸ್. ಬ್ಯಾಳಿ ಹಾಗೂ ಶಿಕ್ಷಕರು ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಶಿಕ್ಷಣದ ಮಹತ್ವ ಕುರಿತು ಮಾತನಾಡಿದರು. ಶಿಕ್ಷಕರಾದ ಐ.ಎ.ಸ್. ಅಂಗಡಿ ಹಾಗೂ ಕವಿತಾ ಮಡಿಗಾರ ಮೌಲಾನಾ ಅಜಾದರ ಕುರಿತು ಮಕ್ಕಳಿಗೆ ಮಾಹಿತಿ ನೀಡಿದರು. ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಬಿಜೆಪಿ ರಾಜ್ಯಾಧ್ಯಕ್ಷರಾಗಿ ಬಿ.ವೈ.ವಿ | ಶಿರಹಟ್ಟಿ ಮಂಡಲ, ನಗರ ಘಟಕದಿಂದ ಸಂಭ್ರಮಾಚರಣೆ

# ಪಕ್ಷದ ಕಾರ್ಯಕರ್ತರಲ್ಲಿ ಹೊಸ ಚೈತನ್ಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಬಿಜೆಪಿ ನೂತನ ರಾಜ್ಯಾಧ್ಯಕ್ಷರಾಗಿ ಆಯ್ಕೆಯಾದ ಸಂಘಟನಾ ಚತುರ ಬಿ.ವೈ. ವಿಜಯೇಂದ್ರ ಅವರಿಂದ ಬಿಜೆಪಿ ಪಕ್ಷದ ಕಾರ್ಯಕರ್ತರಲ್ಲಿ ಆನೆಯ ಬಲ ಮತ್ತು ಹೊಸ ಚೈತನ್ಯ ತುಂಬಿದೆ. ಅವರ ಸಾರಥ್ಯದಲ್ಲಿ ಪಕ್ಷದ ಸಂಘಟನಾ ಶಕ್ತಿ ಇಮ್ಮಡಿಗೊಳ್ಳಲಿದೆ ಎಂಬ ವಿಶ್ವಾಸವಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಬಿ.ವೈ. ವಿಜಯೇಂದ್ರ ಅವರು ರಾಜ್ಯಾಧ್ಯಕ್ಷರಾದ ಹಿನ್ನೆಲೆಯಲ್ಲಿ ಶನಿವಾರ ಪಟ್ಟಣದ ಸೋಮೇಶ್ವರ ದೇವಸ್ಥಾನದಲ್ಲಿ ಬಿಜೆಪಿ ಶಿರಹಟ್ಟಿ ಮಂಡಲ ಮತ್ತು ನಗರ ಘಟಕದಿಂದ ಹಮ್ಮಿಕೊಳ್ಳಲಾಗಿದ್ದ ವಿಶೇಷ ಪೂಜೆ ಮತ್ತು ಸಂಭ್ರಮಾಚರಣೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಪಕ್ಷದ ಕಾರ್ಯಕರ್ತರು ವಿಜಯೇಂದ್ರ ಅವರ ಮುಂದಾಳತ್ವದಲ್ಲಿ ಪಕ್ಷ ಸಂಘಟನೆಗೆ ಮುಂದಾಗೋಣ. ಆ ಮೂಲಕ ದೇಶದ ಅಭಿವೃದ್ಧಿಯ ಹರಿಕಾರ, ವಿಶ್ವದದ ಹೆಮ್ಮೆಯ ಪ್ರಧಾನಿ ನರೇಂದ್ರ ಮೋದಿಜಿ ಅವರ ಕೈ ಬಲಪಡಿಸೋಣ ಎಂದರು.

ತಾಲೂಕಾ ಪ್ರ.ಕಾರ್ಯದರ್ಶಿ ಗಂಗಾಧರ ಮೆಣಸಿನಕಾಯಿ ಮಾತನಾಡಿ, ಬಿಜೆಪಿಯನ್ನು ಮತ್ತಷ್ಟು ಗಟ್ಟಿಗೊಳಿಸುವ ನಾಯಕತ್ವಗುಣ ಬಿ.ವೈ. ವಿಜಯೇಂದ್ರ ಅವರಲ್ಲಿದ್ದು, ಅವರ ಆಯ್ಕೆ ಪಕ್ಷದ ಕಾರ್ಯಕರ್ತರಲ್ಲಿ ಹೊಸ ಹುಮ್ಮಸ್ಸು ಮೂಡಿದೆ. ಕಾರ್ಯಕರ್ತರು ಸಣ್ಣಪುಟ್ಟ ಮನಸ್ತಾಪಗಳನ್ನು ಬದಿಗೊತ್ತಿ ಯುವಕರ ಕಣ್ಮಣಿ ವಿಜಯೇಂದ್ರ ಅವರ ಸಾರಥ್ಯದಲ್ಲಿ ಲೋಕಸಭೆ ಚುನಾವಣೆಯಲ್ಲಿ ಮತ್ತೆ ರಾಜ್ಯದ 28 ಕ್ಷೇತ್ರಗಳನ್ನು ಗೆಲ್ಲುವ ಮೂಲಕ ದೇಶದ ಪ್ರಗತಿಗಾಗಿ ಹಗಲಿರುಳು ಶ್ರಮಿಸುವ ಪ್ರಧಾನಿ ನರೇಂದ್ರ ಮೋದೀಜಿ ಅವರ ಬಲ ವರ್ಧಿಸೋಣ ಎಂದರು.

ಈ ಸಂದರ್ಭದಲ್ಲಿ ಕೆಸಿಸಿ ಬ್ಯಾಂಕ್ ಮಾಜಿ ನಿರ್ದೇಶಕ ಸುನೀಲ ಮಹಾಂತಶೆಟ್ಟರ, ಸೋಮಣ್ಣ ಡಾಣಗಲ್, ಬಸವರಾಜ ಅರಳಿ, ನಗರ ಘಟಕದ ಅಧ್ಯಕ್ಷ ದುಂಡೇಶ ಕೊಟಗಿ, ಆರ್.ಬಿ. ಅಜ್ಜನಗೌಡ್ರ, ಪ್ರಕಾಶ ಬೆಂತೂರ, ಸಿದ್ಧನಗೌಡ ಬಳ್ಳೊಳ್ಳಿ, ರಾಜಶೇಖರ ಶಿಗ್ಲಿಮಠ, ರಮೇಶ ಹಾಳದೋಟದ, ಸೋಮಣ್ಣ ಉಪನಾಳ, ಮಂಜುನಾಥ ಹೊಗೆಸೊಪ್ಪಿನ, ರುದ್ರಪ್ಪ ಉಮಚಗಿ, ಶಕ್ತಿ ಕತ್ತಿ, ನಿಂಗಪ್ಪ ಪ್ಯಾಟಿ, ಅನಿಲ ಮುಳಗುಂದ, ನೀಲಪ್ಪ ಕರ್ಜೆಕಣ್ಣವರ, ಮೈಲಾರಪ್ಪ ಕಾಳೆ, ಉಳವೇಶ ಪಾಟೀಲ, ಪ್ರಕಾಶ ಮಾದನೂರ, ಈರಣ್ಣ ಅಕ್ಕೂರ, ಸಂಗಮೇಶ ಬೆಳವಲಕೊಪ್ಪ, ವಿಶಾಲ ಬಟಗುರ್ಕಿ, ಭೀಮಣ್ಣ ಯಂಗಾಡಿ ಸೇರಿದಂತೆ ಹಲವರಿದ್ದರು.

> ಪಕ್ಷವನ್ನು ಸಮರ್ಥವಾಗಿ ಮುನ್ನಡೆಸುವ, ಸಂಘಟಿಸುವ ಶಕ್ತಿ ಅವರಲ್ಲಿದ್ದು, ಅದನ್ನು ಅವರೀಗಾಗಲೇ ಸಾಬೀತುಪಡಿಸಿದ್ದಾರೆ. ಇದನ್ನು ಮನಗಂಡ ಪಕ್ಷದ ಹೈಕಮಾಂಡ್ ಅವರಿಗೆ ರಾಜ್ಯಾಧ್ಯಕ್ಷ ಸ್ಥಾನ ನೀಡಿರುವುದು ನಾಡಿನ ಎಲ್ಲ ವರ್ಗದವರಲ್ಲೂ ಹರ್ಷ ಮೂಡಿಸಿದೆ. ಮುಂಬರುವ ಲೋಕಸಭೆ, ತಾ.ಪಂ, ಜಿ.ಪಂ ಚುನಾವಣೆಗಳಲ್ಲಿ ಅವರ ನೇತೃತ್ವದಲ್ಲಿ ಪಕ್ಷ ಅಭೂತಪೂರ್ವ ಗೆಲುವು ಸಾಧಿಸಲಿದೆ.
>
> –ಡಾ ಚಂದ್ರು ಲಮಾಣಿ.
> ಶಾಸಕರು, ಶಿರಹಟ್ಟಿ.

# ನೂತನ ತಹಸೀಲ್ದಾರರಾಗಿ ವಾಸುದೇವ ವಿ.ಸ್ವಾಮಿ

▶▶ಮೊದಲನೇ ಪುಟದಿಂದ

ಸಿಬ್ಬಂದಿ ಕೊರತೆ, ಕಟ್ಟಡ, ಅಗತ್ಯ ಸೌಲಭ್ಯಗಳ ಕೊರತೆಯಿದೆ. ಈ ಬಗ್ಗೆ ಪೂರ್ಣ ಮಾಹಿತಿ ಪಡೆದು ಅಗತ್ಯ ಸೌಲಭ್ಯಗಳನ್ನು ಪಡೆಯುವ ಕೆಲಸ ಮಾಡುವೆ. ಜಿಲ್ಲಾಧಿಕಾರಿಗಳು ಮತ್ತು ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಎಲ್ಲ ಸಿಬ್ಬಂದಿಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ತಾಲೂಕಿನ ಅಭಿವೃದ್ಧಿ ಮತ್ತು ಜನಸೇವೆಯನ್ನು ಪ್ರಾಮಾಣಿಕವಾಗಿ ನಿರ್ವಹಿಸುತ್ತೇನೆ ಎಂದರು. ನನ್ನ ಅಧಿಕಾರದ ವ್ಯಾಪ್ತಿಗೆ ಬರುವ ಎಲ್ಲಾ ಕರ್ತವ್ಯಗಳನ್ನ ಪ್ರಮಾಣಿಕವಾಗಿ ಮಾಡುತ್ತೇನೆ. ಲಕ್ಷ್ಮೇಶ್ವರ ತಾಲೂಕನ್ನು ಮಾದರಿಯನ್ನಾಗಿಸುವ ಪ್ರಯತ್ನ ಮಾಡುತ್ತೇನೆ. ತಾಲೂಕಿನ ಹಿರಿಯರ, ಸಾರ್ವಜನಿಕರ, ಇಲಾಖೆಯ ಅಧಿಕಾರಿಗಳ, ಮಾಧ್ಯಮದವರ, ಸಿಬ್ಬಂದಿಗಳ ಸಹಕಾರ ಅಗತ್ಯ ಎಂದರು.

# ಆಝಾದರು ಭಾರತ ಕಂಡ ಶ್ರೇಷ್ಠ ನಾಯಕ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಆ್ಯಂಗ್ಲೋ ಉರ್ದು ಬಾಲಕಿಯರ ಪ್ರೌಢಶಾಲೆಯಲ್ಲಿ ದಿನಾಂಕ ಶನಿವಾರ ಮೌಲಾನಾ ಅಬುಲ್ ಕಲಾಂ ಆಝಾದರ ಜನ್ಮದಿನದ ಪ್ರಯುಕ್ತ 'ರಾಷ್ಟ್ರೀಯ ಶಿಕ್ಷಣ ದಿನ'ವನ್ನು ಆಚರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ಜನಾಬ ಎಲ್.ಆರ್. ಇಟಗಿಯವರು ಮಾತನಾಡಿ, ಮೌಲಾನಾ ಅಬುಲ್ ಕಲಾಂ ಆಝಾದರು ಭಾರತ ಕಂಡ ಶ್ರೇಷ್ಠ ನಾಯಕರಲ್ಲಿ ಒಬ್ಬರಾಗಿದ್ದಾರೆ. ಇವರಲ್ಲಿರುವ ಜ್ಞಾನವನ್ನು ಕಂಡು ಇವರಿಗೆ ಸ್ವತಂತ್ರ ಭಾರತದ ಪ್ರಥಮ ಶಿಕ್ಷಣ ಮಂತ್ರಿಯನ್ನಾಗಿ ಮಾಡಿದ್ದು ಇವರಿಗೆ ನೀಡಿದ ಗೌರವವಾಗಿದೆ. ವಿದ್ಯಾರ್ಥಿಗಳು ಇವರಂತೆ ವಿದ್ಯೆಯನ್ನು ಪಡೆಯಲು ಸದಾ ಮುಂದೆ ಬರಬೇಕು ಎಂದರು.

ಶಿಕ್ಷಕ ಝುಡ್.ಎ. ಮುಲ್ಲಾ ಸ್ವಾಗತಿಸಿದರು. ವಿದ್ಯಾರ್ಥಿನಿ ಆಯಿಶಾ ಸಿದ್ದಿಕಾ ನವಲಗುಂದ ನಿರೂಪಿಸಿದರು. ಶಿಕ್ಷಕ ಎಮ್. ಎಚ್. ಜಮಾಲಸಾಬನವರ ವಂದಿಸಿದರು.

# ರಾಜ್ಯದಲ್ಲಿ ನಿರ್ಲಕ್ಷ್ಯ ತೋರಿದ ಕೇಂದ್ರ ಸರ್ಕಾರ: ಸೈಯದ್ ಖಾಲಿದ್ ಕೊಪ್ಪಳ

■ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯದಲ್ಲಿ ಭೀಕರವಾದ ಬರಗಾಲವಿದ್ದು, ಕೇಂದ್ರ ಸರ್ಕಾರ ಕರ್ನಾಟಕವನ್ನು ಸಂಪೂರ್ಣವಾಗಿ ನಿರ್ಲಕ್ಷಿಸುತ್ತಿದೆ. ಬಿಜೆಪಿಯಿಂದ ಆಯ್ಕೆಯಾದ ಸಂಸದರು ರಾಜ್ಯಕ್ಕೆ ಬರಗಾಲದ ಶೂನ್ಯ ಅನುದಾನವನ್ನು ತಂದಿದ್ದಾರೆ ಎಂದು ಸಾಮಾಜಿಕ ಹೋರಾಟಗಾರ ಸೈಯದ್ ಖಾಲಿದ್ ಕೊಪ್ಪಳ ಆರೋಪಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಚುನಾವಣೆಯ ಸಂದರ್ಭದಲ್ಲಿ ರಾಜ್ಯಕ್ಕೆ ಹೆಚ್ಚು ಬಾರಿ ಪ್ರಚಾರಕ್ಕಾಗಿ ಆಗಮಿಸಿದ್ದಾರೆ. ಆದರೆ, ರಾಜ್ಯದ ರೈತರಿಗೆ ಸಾಂತ್ವನ ಹೇಳಲು ಪ್ರಧಾನಮಂತ್ರಿಗಳು ರಾಜ್ಯಕ್ಕೆ ಆಗಮಿಸಲಿಲ್ಲ. ಪ್ರಧಾನಮಂತ್ರಿಗಳು ಹಾಗೂ ಕೇಂದ್ರ ಸಚಿವರು ರೈತರ ಸಂಕಷ್ಟದಲ್ಲಿ ಭಾಗಿಯಾಗಿಲ್ಲ. ಕೇಂದ್ರ ಸರ್ಕಾರದಿಂದ ರೈತರಿಗೆ ಹಾಗೂ ಸಾಮಾನ್ಯ ಜನರಿಗೆ ಬಿಜೆಪಿಯಿಂದ ಅನ್ಯಾಯವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

# ಜೈಲಿನಿಂದ ಬಿಡುಗಡೆಯಾದ ಅಭಿನವ ಹಾಲಶ್ರೀ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಉದ್ಯಮಿ ಗೋವಿಂದ ಪೂಜಾರಿ ಅವರಿಗೆ ಬೈಂದೂರು ಕ್ಷೇತ್ರದ ಬಿಜೆಪಿ ಟಿಕೆಟ್ ಕೊಡಿಸುವುದಾಗಿ ನಂಬಿಸಿ ಐದು ಕೋಟಿ ರೂ. ವಂಚನೆ ಮಾಡಿದ ಪ್ರಕರಣದಲ್ಲಿ ಮೂರನೇ ಆರೋಪಿಯಾಗಿರುವ ಹಿರೇಹಡಗಲಿಯ ಹಾಲ ಸ್ವಾಮಿ ಮಠದ ಶ್ರೀ ಅಭಿನವ ಹಾಲಶ್ರೀ ಸ್ವಾಮೀಜಿ ಅವರನ್ನು ಪರಪ್ಪನ ಅಗ್ರಹಾರ ಜೈಲಿನಿಂದ ಬಿಡುಗಡೆ ಮಾಡಲಾಗಿದೆ.

ವಂಚನೆ ಪ್ರಕರಣದಲ್ಲಿ ಜೈಲು ಸೇರಿದ್ದ ಸ್ವಾಮೀಜಿಗೆ ರಾಜ್ಯ ಹೈಕೋರ್ಟ್ ನವೆಂಬರ್ 8ರಂದು ಜಾಮೀನು ನೀಡಿತ್ತು. ಇದಾದ ಬಳಿಕ ಶೂರಿಟಿ, ಇಬ್ಬರು ವ್ಯಕ್ತಿಗಳ ಬಾಂಡ್ ಸೇರಿದಂತೆ ಹಲವು ಷರತ್ತುಗಳನ್ನು ಪೂರೈಸಿದ ಬಳಿಕ ಶನಿವಾರ ಅವರನ್ನು ಜೈಲಿನಿಂದ ಬಿಡುಗಡೆ ಮಾಡಲಾಗಿದೆ.

ಕೋಲಾರ– ಚಿಕ್ಕಬಳ್ಳಾಪುರ ಹಾಲು ಮಹಾಮಂಡಲ ಹಿಂದಿನಂತೆ ಪ್ರತ್ಯೇಕ: ಸಿದ್ದರಾಮಯ್ಯ

# ಕೆಜಿಎಫ್‌ನಲ್ಲಿ ಹೊಸ ಕೈಗಾರಿಕಾ ಟೌನ್‌ಶಿಪ್



■ವಿಜಯಸಾಕ್ಷಿ ಸುದ್ದಿ, ಕೋಲಾರ

ಈ ಬಾರಿಯ ಬಜೆಟ್‌ನಲ್ಲಿ ಕೆಜಿಎಫ್ ನಲ್ಲಿರುವ 965 ಕೈಗಾರಿಕಾ ಪ್ರದೇಶವನ್ನು ಬಿ ಇ ಎಂ.ಎಲ್ ನಿಂದ ಹಿಂಪಡೆದು ಅಲ್ಲಿ ಹೊಸ ಕೈಗಾರಿಕಾ ಟೌನ್ಸ್ ಶಿಪ್ ನಿರ್ಮಾಣ ಮಾಡಲಾಗುವುದು ಎಂದು ಮುಖ್ಯ ಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಶನಿವಾರ ಜಿಲ್ಲೆಯ ಬಂಗಾರಪೇಟೆ ತಾಲೂಕುಗಳಿಗೆ ಕುಡಿಯುವ ನೀರು ಒದಗಿಸುವ ಯರಗೋಳ್ ಯೋಜನೆ ಹಾಗೂ ಜಿಲ್ಲೆಯ ವಿವಿಧ ಅಭಿವೃದ್ಧಿ ಯೋಜನೆಗಳ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ನೆರವೇರಿಸಿ ಮಾತನಾಡಿದರು.

ಹಿಂದೆ ಪ್ರತ್ಯೇಕವಾಗಿದ್ದ ಕೋಲಾರ– ಚಿಕ್ಕಬಳ್ಳಾಪುರ ಹಾಲು ಒಕ್ಕೂಟವನ್ನು ಒಂದು ಮಾಡಲಾಗಿತ್ತು. ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಪ್ರತ್ಯೇಕ ಡೈರಿ ಸ್ಥಾಪನೆಗೆ ಮಂಜೂರಾತಿ ನೀಡಲಾಗಿದೆ. ಪ್ರತಿ ತಿಂಗಳು 2 ತಿಂಗಳು ವಿದ್ಯುತ್ ಬಿಲ್ಲು ಕಟ್ಟಲಾಗುತ್ತಿತ್ತು. ಅದನ್ನು ತಪ್ಪಿಸಲು 50 ಎಕರೆ ಜಾಗದಲ್ಲಿ ಸ್ವಂತ ವಿದ್ಯುತ್ ಉತ್ಪಾದಿಸಲು ಸೋಲಾರ್ ಘಟಕ ಸ್ಥಾಪನೆಗೆ ಪರವಾನಗಿ ನೀಡಲಾಗಿದೆ. ಕೋಲಾರ ಹಾಲು ಒಕ್ಕೂಟದಿಂದ ರೈತರಿಗೆ ಅನುಕೂಲವಾಗಲಿದೆ ಎಂದರು.

ಬರಗಾರವಿದ್ದರೂ 2263 ಕೋಟಿ ರೂ.ಗಳನ್ನು ಜಿಲ್ಲೆಯ ಅಭಿವೃದ್ಧಿಗಾಗಿ ನೀಡಿದ್ದೇವೆ. ಕೆ.ಹೆಚ್.ಮುನಿಯಪ್ಪ ಅವರು ಸಚಿವರಾಗಿದ್ದಾಗ 83 ಕೋಟಿ ರೂ.ಗಳನ್ನು ಮಂಜೂರು ಮಾಡಿಸಿರುವುದಕ್ಕಾಗಿ ಹಾಗೂ ಯೋಜನೆಗೆ ಸಹಕರಿಸಿದ ಎಲ್ಲರಿಗೂ ಮುಖ್ಯಮಂತ್ರಿಗಳು ಧನ್ಯವಾದಗಳನ್ನು ಅರ್ಪಿಸಿದರು.

ಕೊಡುಗೆ ಸ್ಮರಿಸಬೇಕು

ಒಂದು ಕಾಲದಲ್ಲಿ ಕೋಲಾರ, ಬಂಗಾರಪೇಟೆಯಲ್ಲಿ ಕುಡಿಯುವ ನೀರನ್ನು ಟ್ಯಾಂಕರ್ ಮೂಲಕ ನೀಡುವ ಪರಿಸ್ಥಿತಿ ಇತ್ತು. ಕುಡಿಯುವ ನೀರು ಸಿಗುತ್ತಿರಲಿಲ್ಲ. ಅದಕ್ಕೆ ಯೋಚಿಸಿ ಮಾರ್ಕಂಡೇಯ ನದಿಗೆ ಯರಗೋಳ್ ಗ್ರಾಮದ ಬಳಿ ಅಣೆಕಟ್ಟು ನಿರ್ಮಿಸಿ ನೀರು ಶೇಖರಿಸಿ ಮೂರೂ ಪಟ್ಟಣಗಳಿಗೆ ಕುಡಿಯುವ ನೀರು ಕೊಡುವ ಯೋಜನೆ ರೂಪಿಸಲಾಯಿತು. ಇದು ಇಂದು ಕಾರ್ಯಗತವಾಗುತ್ತಿರುವ ಹಿಂದೆ ಮಾಜಿ ಸಚಿವ ಶ್ರೀನಿವಾಸಗೌಡ ಅವರ ಕೊಡುಗೆಯನ್ನು ಸ್ಮರಿಸಬೇಕು ಎಂದರು. ಟೀಚರ್ ಚಂದ್ರಪ್ಪ, ನಾರಾಯಣಸ್ವಾಮಿ ಅವರನ್ನು ಸ್ಮರಿಸಬೇಕು. ಯರಗೋಳ್ ಯೋಜನೆ 2006 ರಲ್ಲಿ ಪ್ರಾರಂಭವಾದರೂ, ಕಾರ್ಯಗತವಾಗಲಿಲ್ಲ. ಬಂಗಾರಪೇಟೆ ಶಾಸಕ ನಾರಾಯಣಸ್ವಾಮಿಯವರು ಒತ್ತಾಯ ಮಾಡಿ ಚಾಲನೆ ನೀಡಿದರು. ಹಾಗಾಗಿ ಇದಕ್ಕೆ ಚಾಲನೆ ದೊರಕುತ್ತಿದೆ.



38.1 ಗಜ ಆಳದಲ್ಲಿ ನೀರು ನಿಲ್ಲಲಿದೆ. ಈ ಮೂರು ಪಟ್ಟಣಗಳಿಗೆ ನೀರು ಸಾಕಾಗುತ್ತದೆ ಎನ್ನುವುದು ನನ್ನ ಭಾವನೆ. ಕೆಜಿಎಫ್ ಶಾಸಕಿ ರೂಪ ಅವರೂ ಕೂಡ ಕೆಜಿಎಫ್ ಗೆ ಯರಗೋಳ್ ಯೋಜನೆಯಿಂದ ನೀರು ಒದಗಿಸಲು ಕೋರಿದ್ದು, ಈ ಬಗ್ಗೆ ಚರ್ಚೆ ಮಾಡಿ ನೀರು ಸಿಕ್ಕರೆ ಎಷ್ಟೇ ಖರ್ಚಾದರೂ ನೀರು ಕೊಡುತ್ತೇವೆ ಎಂದು ಭರವಸೆ ನೀಡಿದರು. ಒಂದು ಕ್ಷೇತ್ರದಲ್ಲಿ 2223 ಕೋಟಿ ರೂ.ಗಳ ಬೃಹತ್ ಮೊತ್ತದ ಕಾಮಗಾರಿಗಳಿಗೆ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿದೆ ಎಂದರು.

ಯರಗೋಳು ಯೋಜನೆಗೆ 23 ಸಾವಿರ ಕೋಟಿ ರೂ ವೆಚ್ಚ

ಕೋಲಾರ, ಚಿತ್ರದುರ್ಗ ಬರಗಾಲಕ್ಕೆ ತುತ್ತಾಗಿರುವ ಜಿಲ್ಲೆಗಳು. ರಾಜಸ್ಥಾನ ಬಿಟ್ಟರೆ ಅತಿ ಹೆಚ್ಚು ಬರಗಾಲಕ್ಕೆ ತುತ್ತಾಗಿರುವ ರಾಜ್ಯ ಕರ್ನಾಟಕ. ಹೆಚ್.ಎನ್. ವ್ಯಾಲಿ, ಕೆ.ವ್ಯಾಲಿ, ಪುಷ್ಪಾವತಿ ವ್ಯಾಲಿ ಜಾರಿ ಮಾಡಿದ ನಾವು ಎತ್ತಿನಹೊಳೆ ಯೋಜನೆಯನ್ನು ಜಾರಿ ಮಾಡಲೇಬೇಕೆಂದು ಒತ್ತಾಯ ಮಾಡಿದ್ದು ಮಹಾಜನತೆ. ಯೋಜನೆ ಕಾರ್ಯಸಾಧುವಾಗಿದ್ದರೆ ಎಷ್ಟೇ ಖರ್ಚಾದರೂ ಯೋಜನೆ ಜಾರಿ ಮಾಡಲಾಗುವುದು ಎಂದು ಭರವಸೆ ನೀಡಲಾಗಿತ್ತು. ಯರಗೋಳು ಯೋಜನೆಗೆ 23 ಸಾವಿರ ಕೋಟಿ ರೂ ವೆಚ್ಚವಾಗಿದೆ. ಕೆ.ಸಿ.ವ್ಯಾಲಿಗೆ 1800 ಕೋಟಿ ರೂ ಹಾಗೂ ಹೆಚ್. ಎನ್.ವ್ಯಾಲಿಗೆ 800 ಕೋಟಿ ರೂ. ವೆಚ್ಚವಾಗಿದ್ದು, ಇದು ಅಭಿವೃದ್ಧಿ ಅಲ್ಲವೇ ಎಂದು ಪ್ರಶ್ನಿಸಿದರು.

ಕೋಲಾರದಲ್ಲಿ ಹಣ್ಣು ತರಕಾರಿ, ರೇಷ್ಮೆ ಬೆಳೆಯುತ್ತಿದ್ದರೆ ಕೆರೆಗಳು ತುಂಬಿರುವುದರಿಂದ. 1200 ಅಡಿಗಳವರೆಗೆ ಕೊರೆದರೂ ನೀರು ಸಿಗದ ಕಾಲವೊಂದಿತ್ತು. ಆದ್ದರಿಂದ ನೀರು ತುಂಬಿ ಅಂತರ್ಜಲ ಮಟ್ಟ ಹೆಚ್ಚಾಗಬೇಕು ಎಂದು ಒತ್ತಾಯಿಸಿದ್ದರು. ಇಲ್ಲಿ ಯಾವುದೇ ಪ್ರಮುಖ ನದಿ ಇಲ್ಲದಿರುವುದರಿಂದ ಕೆರೆಗಳು ತುಂಬುವುದು ಅವಶ್ಯ. ಕುಡಿಯುವ ನೀರು ನೀಡುವುದು ಅತ್ಯಂತ ಅಗತ್ಯ ಎಂದು ಮನಗಂಡು ಮಂಜೂರು ಮಾಡಲಾಯಿತು. ಯರಗೋಳ್ ಯೋಜನೆಗೆ ಅಂದು 13 ಕೋಟಿ, ಇಂದು 23 ಕೋಟಿ ರೂ.ಗಳ ವೆಚ್ಚವಾಗುತ್ತಿದೆ. ಎಲ್ಲಾ ಯೋಜನೆಗಳನ್ನು ಈ ಅವಧಿ ಮುಗಿಯುವುದರೊಳಗೆ ಪೂರ್ಣಗೊಳಿಸಲಾಗುವುದು ಎಂದರು.

## ವಿರೋಧಿಗಳೇ ಕಣ್ತೆರೆದು ನೋಡಿ

ಸಿದ್ದರಾಮಯ್ಯ ಅವರ ಸರ್ಕಾರದಲ್ಲಿ ಅಭಿವೃದ್ಧಿ ಕೆಲಸಗಳು ನಡೆಯುತ್ತಿಲ್ಲ. ಗ್ಯಾರಂಟಿ ಯೋಜನೆಗಳ ನಂತರ ಅಭಿವೃದ್ಧಿ ಕೆಲಸಗಳು ಸ್ಥಗಿತವಾಗಿವೆ ಎಂದು ಟೀಕಿಸುವ ವಿರೋಧಿಗಳಿಗೆ ಕಣ್ತೆರೆದು ನೋಡುವಂತೆ ತಿಳಿಸಿದ ಮುಖ್ಯಮಂತ್ರಿಗಳು, ಕಣ್ಣು ಮುಚ್ಚಿಕೊಂಡು, ರಾಜಕೀಯ ಕಾರಣಗಳಿಗಾಗಿ ಮಾತನಾಡಬೇಡಿ ಎಂದರು. ಇದು ಸಣ್ಣ ಅನುದಾನವಲ್ಲ. ಕೋಲಾರ ಜಿಲ್ಲೆ, ಚಿಕ್ಕಬಳ್ಳಾಪುರ, ತುಮಕೂರು, ಬೆಂಗಳೂರು ಗ್ರಾಮಾಂತರ, ಹಾಸನ ಜಿಲ್ಲೆಗಳಿಗೆ ಎತ್ತಿನಹೊಳೆ ಯೋಜನೆಯನ್ನು ಯಾರು ಜಾರಿಗೆ ಮಾಡಿದ್ದು? ವಿರೋಧಿಸುವವರು ಮಾಡಿಕೊಟ್ಟರೆ ಎಂದು ಪ್ರಶ್ನಿಸಿದರು. ಎತ್ತಿನಹೊಳೆ ಯೋಜನೆ ಜಾರಿಯಾಗುವುದಿಲ್ಲ ಎನ್ನುವವರಿಗೆ ಇಂದು ಉತ್ತರ ಸಿಕ್ಕಿದೆ ಎಂದು ಕುಟುಕಿದರು.

## ಕುಮಾರಸ್ವಾಮಿಗೆ ಹೇಳಿ

ಕೆ.ಸಿ.ವ್ಯಾಲಿ ಯೋಜನೆ ಜಾರಿ ಮಾಡಬಾರದು. ಅದರ ಮೂಲಕ ಜನರಿಗೆ ವಿಷ ನೀಡಲಾಗುತ್ತಿದೆ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಹೇಳುತ್ತಾರೆ. ಯೋಜನೆಯಿಂದ ಕೆರೆಗಳು ತುಂಬಿವೆ. ದನಕರುಗಳಿಗೆ ಮೇವಾಗಿದೆ. ಈವರೆಗೆ ಜನ, ದನಕರುಗಳು ಸತ್ತ ಉದಾಹರಣೆ ಇದೆಯೇ? ಎಂದು ಮುಖ್ಯಮಂತ್ರಿ ಗಳು ಜನರನ್ನು ಕೇಳಿದಾಗ ಇಲ್ಲ ಎಂದು ಜೋರಾಗಿ ಕೂಗಿದರು. ಇದನ್ನು ಕುಮಾರಸ್ವಾಮಿಗೆ ಹೇಳಿ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

# ಡಾ. ತಯಬಅಲಿ ಹೊಂಬಳರಿಗೆ 'ಗುರುಕುಲ ಸಾಹಿತ್ಯ ಕೇಸರಿ' ಪ್ರಶಸ್ತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗುರುಕುಲ ಕಲಾ ಪ್ರತಿಷ್ಠಾನ ತುಮಕೂರು ಕೇಂದ್ರ ಸಮಿತಿ ವತಿಯಿಂದ ಮಕ್ಕಳ ಸಾಹಿತ್ಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದವರಿಗೆ ಕೊಡುಮಾಡುವ ಪ್ರತಿಷ್ಠಿತ 'ಗುರುಕುಲ ಸಾಹಿತ್ಯ ಕೇಸರಿ' ಪ್ರಶಸ್ತಿಗೆ ಗದುಗಿನ ಮಕ್ಕಳ ಸಾಹಿತಿ ಡಾ. ತಯಬಅಲಿ.ಅ.ಹೊಂಬಳರವರ 46ನೇ ಕೃತಿ 'ಚಂದಾಮಾಮ ಚಕ್ಕುಲಿಮಾಮಾ' ಮಕ್ಕಳ ಸಚಿತ್ರ ಕಥಾ ಸಂಕಲ ಆಯ್ಕೆಯಾಗಿದೆ.



ಗೌರವ ಪ್ರಶಸ್ತಿಯು ವಿಜಯನಗರ ಜಿಲ್ಲೆಯ ಹಂಪಿಯ ವಿರೂಪಾಕ್ಷ ದೇವಾಲಯದ ಹತ್ತಿರ ಇರುವ ಕೊಟ್ಟೂರೇಶ್ವರ ಸಂಸ್ಥಾನ ಮಠದಲ್ಲಿ ಸುವರ್ಣ ಕರ್ನಾಟಕ ಸಂಭ್ರಮದ ಸವಿನೆನಪಿಗಾಗಿ ನಡೆಯಲಿರುವ ಅಖಿಲ ಭಾರತ 3ನೇ ಗುರುಕುಲ ಕಲಾ ಸಮ್ಮೇಳನದಲ್ಲಿ ಶ್ರೀ ಬಸವಲಿಂಗ ಮಹಾಸ್ವಾಮಿಗಳ ದಿವ್ಯ ಸಾನ್ನಿಧ್ಯದಲ್ಲಿ ಮಾತೆ ಮಂಜಮ್ಮ ಜೋಗತಿ ಇವರ ಗೌರವ ಉಪಸ್ಥಿತಿಯಲ್ಲಿ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ ಎಂದು ಗುರುಕುಲ ಕಲಾ ಪ್ರತಿಷ್ಠಾನದ ಸಂಸ್ಥಾಪಕ ಅಧ್ಯಕ್ಷ ಹುಲಿಯೂರುದುರ್ಗದ ನಾರಾಯಣರವರು ತಿಳಿಸಿದ್ದಾರೆ.

# ತೊಟ್ಟಿಲು ತೂಗುವ ಕೈ ದೇಶವನ್ನು ಆಳಬಲ್ಲದು



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವೀರವನಿತೆ ಒನಕೆ ಓಬವ್ವ ಕನ್ನಡ ನಾಡಿನ ನಾರಿಯರ ಶಕ್ತಿಯ ಪ್ರತೀಕವಾಗಿದ್ದಾರೆ. ನಾಡಿನ ಸಂರಕ್ಷಣೆಯ ಬಗ್ಗೆ ಅವರಿಗಿದ್ದ ಅಭಿಮಾನ, ಸ್ವಾಭಿಮಾನ, ಸಮರ್ಪಣಾ ಮನೋಭಾವ ಎಲ್ಲರಿಗೂ ಸ್ಫೂರ್ತಿಯಾಗಿದೆ ಎಂದು ತಹಸೀಲ್ದಾರ ವಾಸುದೇವ.ವಿ. ಸ್ವಾಮಿ ಹೇಳಿದರು.

ಅವರು ಶನಿವಾರ ಪಟ್ಟಣದ ತಹಸೀಲ್ದಾರ ಕಚೇರಿಯಲ್ಲಿ ಒನಕೆ ಓಬವ್ವ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿ, ತೊಟ್ಟಿಲು ತೂಗುವ ಕೈ ದೇಶವನ್ನು ಆಳಬಲ್ಲದು ಎಂಬುದನ್ನು ಕನ್ನಡ ನಾಡಿನ ಹೆಮ್ಮೆಯ ಓಬವ್ವ ಸಾಬೀತುಪಡಿಸಿ ಇತಿಹಾಸದಲ್ಲಿ ದಾಖಲಾಗಿದ್ದಾರೆ. ಸ್ವಾತಂತ್ರ್ಯಕ್ಕಾಗಿ, ನಾಡಿನ ಸಂರಕ್ಷಣೆಗಾಗಿ ಉಸಿರಿರುವವರೆಗೆ ಹೋರಾಡಿದ ಕಿತ್ತೂರು ರಾಣಿ ಚನ್ನಮ್ಮ, ಉಳ್ಳಾಲದ ರಾಣಿ ಅಬ್ಬಕ್ಕ, ಬೆಳವಡಿ ಮಲ್ಲಮ್ಮ, ಕೆಳದಿ ಚೆನ್ನಮ್ಮ, ಒನಕೆ ಓಬವ್ವ ಮೊದಲಾದವರು ಸ್ಮರಣೀಯರು. ಚಿತ್ರದುರ್ಗದ ಕೋಟೆಯ ರಕ್ಷಣೆಗಾಗಿ ಸಮರ್ಪಣೆಗೈದ ವೀರಮಹಿಳೆ ಓಬವ್ವ ಇತಿಹಾಸದ ಪುಟದಲ್ಲಿ ಅಜರಾಮರವಾಗಿದ್ದಾಳೆ. ವೀರವನಿತೆಯ ವೀರಕಥನ ಪ್ರತಿಯೊಬ್ಬ ಕನ್ನಡಿಗನಿಗೂ ಪ್ರೇರಣಾದಾಯಕ ಎಂದರು.

ಈ ವೇಳೆ ಗ್ರೇಡ್-2 ತಹಸೀಲ್ದಾರ ಮಂಜುನಾಥ ಅಮಾಸಿ, ಕಂದಾಯ ನಿರೀಕ್ಷಕ ಬಿ.ಎಂ. ಕಾತರಾಳ, ಶಿರಸ್ತೇದಾರ ಆರ್.ಎಂ. ಹರಿಜನ, ಪ್ರಶಾಂತ ಸನದಿ, ಡಿ.ಎಸ್. ಕುಲಕರ್ಣಿ, ಸತೀಶ ಬೋಮಲೆ, ಬಿ.ಎಸ್. ಹಿರೇಮಠ, ಗುರಪ್ಪ ವಡ್ಡರ ಸೇರಿದಂತೆ ಸಿಬ್ಬಂದಿಗಳು, ಸಾರ್ವಜನಿಕರು ಭಾಗವಹಿಸಿದ್ದರು.

# ರಿಲಯನ್ಸ್ ಫೌಂಡೇಷನ್ ವತಿಯಿಂದ ಆರೋಗ್ಯ ಜಾಗೃತಿ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಹಿಳೆಯರು ಆರೋಗ್ಯದ ಕಡೆ ಗಮನ ಕೊಡಬೇಕು ಎಂದು ಗ್ರಾಮ ಆರೋಗ್ಯ ಸಂಯೋಜಕಿ ವಿದ್ಯಾ ಕಿತ್ತೂರ ಹೇಳಿದರು.

ಅವರು ಸಮೀಪದ ಸೊರಟೂರ ಗ್ರಾಮದಲ್ಲಿ ರಿಲಯನ್ಸ್ ಫೌಂಡೇಷನ್ ಸಹಯೋಗದಲ್ಲಿ ಸಂಜೀವಿನಿ ಒಕ್ಕೂಟ ಮಹಿಳಾ ಸಂಘದ ಸದಸ್ಯರಿಗೆ ಆರೋಗ್ಯ ಜಾಗೃತಿ ಕಾರ್ಯಕ್ರಮ ಹಾಗೂ ಮಣ್ಣಿನ ಸಂರಕ್ಷಣೆ ಕುರಿತ ಕಾರ್ಯಕ್ರಮದಲ್ಲಿ ಮಾತನಾಡಿ, ಬಾಲ್ಯ ವಿವಾಹ, ಮುಟ್ಟಿನ ನೈರ್ಮಲ್ಯ ಹಾಗೂ ಅಪೌಷ್ಟಿಕತೆ ಮತ್ತು ಕ್ಷಯ ರೋಗಗಳು ಮಹಿಳೆಯರಲ್ಲಿ ಕಂಡುಬರುತ್ತಿದ್ದು, ಮಹಿಳೆಯರ ಆರೋಗ್ಯದಲ್ಲಿ ಏರುಪೇರು ಕಂಡುಬಂದಲ್ಲಿ ತಕ್ಷಣವೇ ಸಮೀಪದ ಸರಕಾರಿ ಆಸ್ಪತ್ರೆಗೆ ಭೇಟಿ ನೀಡಬೇಕು. ಸಮಾಜಕ್ಕಾಗಿ ರಿಲಯನ್ಸ್ ಫೌಂಡೇಶನ್ ಹಮ್ಮಿಕೊಳ್ಳುವ ಕಾರ್ಯಕ್ರಮಗಳು ಶ್ಲಾಘನೀಯ ಎಂದರು.

ಚಂದ್ರ ಬಳಿಗೇರ ಮಾತನಾಡಿ, ರೈತರು ಹೊಲದಲ್ಲಿ ನೀರಿನ ಹರಿವನ್ನು ತಡೆಯಲು ಹೊಲಗಳ ಸುತ್ತ ಬದುಗಳನ್ನು ನಿರ್ಮಿಸಬೇಕು ಹಾಗೂ ಬದುಗಳ ಹತ್ತಿರ ಗಿಡ-ಮರಗಳನ್ನು ಬೆಳೆಸುವುದರಿಂದ ಮಣ್ಣಿನ ಸವಕಳಿ ತಡೆಯಬಹುದು ಎಂದರು.

ಸೊರಟೂರ ಗ್ರಾ.ಪಂ ಅಧ್ಯಕ್ಷರಾದ ಜಯಶ್ರೀ ಬಂಕಾಪೂರ ಅಧ್ಯಕ್ಷತೆ ವಹಿಸಿದ್ದರು. ರಿಲಯನ್ಸ್ ಫೌಂಡೇಷನ್ ಅಧಿಕಾರಿ ಬಿ.ಎನ್. ನದಾಫ್ ಹಾಜರಿದ್ದರು.

# ಶಿಕ್ಷಣದಿಂದ ಮಾನವನ ಉನ್ನತಿ ಸಾಧ್ಯ



■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರತಿಯೊಬ್ಬರಿಗೂ ಶಿಕ್ಷಣ ಅತ್ಯಗತ್ಯವಾಗಿದ್ದು, ಶಿಕ್ಷಣದಿಂದ ಮಾನವನ ಉನ್ನತಿ ಸಾಧ್ಯವೆಂದು ಅರಿತ ಮೌಲಾನ ಅಬುಲ್ ಕಲಾಂ ಆಝಾದ್ ಅವರು ಶಿಕ್ಷಣಕ್ಕೆ ಹೆಚ್ಚು ಮಹತ್ವ ನೀಡಿದರೆಂದು ಗದಗ ಆಝಾದ್ ಕೋ-ಆಪ್ ಬ್ಯಾಂಕ್‌ನ ವ್ಯವಸ್ಥಾಪಕ ವೈ.ಎಸ್. ಹುಬ್ಬಳ್ಳಿ ಅಭಿಪ್ರಾಯಪಟ್ಟರು.

ಗದಗ ಡಿ.ಸಿ.ಮಿಲ್ ರಸ್ತೆಯ ಸರಕಾರಿ ಹಿರಿಯ ಉರ್ದು ಪ್ರಾಥಮಿಕ ಶಾಲೆಯಲ್ಲಿ ಜರುಗಿದ ಅಬುಲ್ ಕಲಾಂ ಆಝಾದ್ ಅವರ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ಅವರು, ಉತ್ತಮ ಪತ್ರಕರ್ತರಾಗಿದ್ದ ಆಝಾದ್ ಅವರು ಬ್ರಿಟೀಷರ ಆಡಳಿತ ವಿರುದ್ಧ ಹರಿತವಾದ ಲೇಖನಗಳನ್ನು ಬರೆಯುವ ಮೂಲಕ ಖ್ಯಾತಿ ಪಡೆದರು ಎಂದರು.

ಆಝಾದ್ ಕೋ-ಆಪ್ ಬ್ಯಾಂಕ್‌ನಿಂದ ಶಾಲೆಗೆ ಮೌಲಾನ ಅಬುಲ್ ಕಲಾಂ ಆಝಾದ್‌ರ ಭಾವಚಿತ್ರ, ಮಕ್ಕಳಿಗೆ ಸಿಹಿಯೊಂದಿಗೆ ನೋಟ್‌ಪುಸ್ತಕವನ್ನು ವಿತರಿಸಲಾಯಿತು.

ಆಝಾದ್ ಕೋ-ಆಪ್ ಬ್ಯಾಂಕ್‌ನ ವ್ಯವಸ್ಥಾಪಕ ನಿರ್ದೇಶಕ ಎ.ಜಿ. ಯರಗುಡಿ, ಸಿಆರ್‌ಪಿ ಕೆ.ಎ. ಜಲಗೇರಿ, ಎಸ್‌ಡಿಎಂಸಿ ಉಪಾಧ್ಯಕ್ಷೆ ಫರಿದಾ ಯರಗುಡಿ, ಮುಖ್ಯೋಪಾಧ್ಯಾಯೆ ಐ.ಎಂ. ಮಕಾನದಾರ, ಎಸ್.ಆರ್. ಪಣಿಬಂದ್, ಎಫ್.ಜಿ. ಕರಬಡ್ಡಿ, ಎಸ್.ಜಿ. ಬ್ಯಾಳಿ, ಎಸ್.ಎಂ. ಮಕಾನದಾರ, ಎಚ್.ಎಸ್. ಬಿಜಾಪೂರ, ಆರ್.ಎಂ. ಮಕಾನದಾರ, ಎಸ್.ಎಸ್. ಬಿಜಾಪೂರ, ಬ್ಯಾಂಕ್ ಸಿಬ್ಬಂದಿ, ವಿದ್ಯಾರ್ಥಿಗಳು ಪಾಲಕರು ಪಾಲ್ಗೊಂಡಿದ್ದರು.

# ದೀಪಾವಳಿ ಹಬ್ಬಕ್ಕೆ ತೆರಳಲು ಮೆಜೆಸ್ಟಿಕ್‌ನತ್ತ ಪ್ರಯಾಣಿಕರ ದಂಡು

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ದೀಪಾವಳಿ ಹಬ್ಬದ ಸಂಭ್ರಮ ಎಲ್ಲೆಡೆ ಮನೆ ಮಾಡಿದ್ದು, ಊರಿಗೆ ತೆರಳಲು ಪ್ರಯಾಣಿಕರು ಮುಂದಾಗಿದ್ದಾರೆ. ಇಂದೂ ಸಹ ಮೆಜೆಸ್ಟಿಕ್ ಕಡೆ ಪ್ರಯಾಣಿಕರ ದಂಡು ಆಗಮಿಸಿದೆ. ರಾತ್ರಿ ಬಸ್ ಸಿಗದವರು ಸೀಟ್ ರಿಸರ್ವ್ ಮಾಡದವರು, ಬೆಳಗ್ಗೆ ತಮ್ಮೂರಿಗೆ ಕಡೆ ಪ್ರಯಾಣ ಮಾಡಲು ಆಗಮಿಸಿದ್ದಾರೆ.

ಬೆಳಗ್ಗೆಯಿಂದ ನೂರಕ್ಕೂ ಹೆಚ್ಚುವರಿ ಬಸ್ ಸೇವೆ ಕಲ್ಪಿಸಲಾಗಿದೆ. ಪ್ರಯಾಣಿಕರ ಅಗತ್ಯಕ್ಕೆ ತಕ್ಕಂತೆ ಏಖಖಖಿಅ ಹೆಚ್ಚುವರಿ ಬಸ್ ಬಿಡುತ್ತಿದೆ. ಬಳ್ಳಾರಿ, ಹುಬ್ಬಳ್ಳಿ, ದಾವಣಗೆರೆ, ಗುಲಬರ್ಗಾ, ಶಿವಮೊಗ್ಗ ಕಡೆ ಬಸ್ ವ್ಯವಸ್ಥೆ ಮಾಡಲಾಗಿದೆ.

## ಬಿಳಕಿ ಹಿರೇಮಠದ ಧರ್ಮ ಜಾಗೃತಿ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಅಂತರಂಗ-ಬಹಿರಂಗ ಶುದ್ಧಿಗೊಳಿಸುವುದೇ ಗುರುವಿನ ಧರ್ಮ



ಸಮಾರಂಭ ಉದ್ಘಾಟಿಸಿದ ಸಂಸದ ಬಿ.ವೈ. ರಾಘವೇಂದ್ರ ಮಾತನಾಡಿ, ಮನುಷ್ಯ ಅಧಿಕಾರ-ಅಂತಸ್ತುಗಳ ಬೆನ್ನು ಹತ್ತಿ ಮನಸ್ಸಿನ ಶಾಂತಿ ಕಳೆದುಕೊಳ್ಳುತ್ತಿದ್ದಾನೆ. ಜೀವನ ಸಂವರ್ಧನೆಗೆ ಕಾರಣವಾಗಿರುವ ಪರಮ ಶಿವಜ್ಞಾನದ ಅರಿವನ್ನು ಸ್ವಲ್ಪಾದರೂ ಅರಿತು ಜೀವನ ನಡೆಸಿದರೆ ಸಾರ್ಥಕಗೊಳ್ಳುವುದು. ಸತ್ಯ ಧರ್ಮದತ್ತ ಕೊಂಡೊಯ್ಯುವ ಬಹು ದೊಡ್ಡ ಕಾರ್ಯವನ್ನು ಮಠಾಧೀಶರು ಮಾಡುತ್ತಾ ಬಂದಿದ್ದಾರೆ. ಆರೋಗ್ಯಪೂರ್ಣ ಸಮಾಜ ನಿರ್ಮಾಣಕ್ಕೆ ಗುರುವಿನ ಮಾರ್ಗದರ್ಶನ ನಮ್ಮೆಲ್ಲರಿಗೆ ಆಶಾ ಕಿರಣವಾಗಿದೆ ಎಂದರು.

■ ವಿಜಯಸಾಕ್ಷಿ ಸುದ್ದಿ, ಭದ್ರಾವತಿ

ಬಾಳಿನ ಉನ್ನತಿ-ಅವನತಿಗಳಿಗೆ ಮನಸ್ಸು ಮೂಲ. ಸುಖ ಬಯಸುವುದು ಮನುಷ್ಯನ ಸಹಜ ಗುಣ. ಅಂತರಂಗ ಮತ್ತು ಬಹಿರಂಗ ಇವೆರಡನ್ನು ಶುದ್ಧಿಗೊಳಿಸುವುದೇ ನಿಜವಾದ ಗುರುವಿನ ಧರ್ಮವಾಗಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶನಿವಾರ ತಾಲೂಕಿನ ಬಿಳಕಿ ಹಿರೇಮಠದಲ್ಲಿ ಲಿಂ.ಗುರುಸಿದ್ಧ ಶ್ರೀಗಳವರ ಮತ್ತು ರಾಚೋಟೇಶ್ವರ ಶ್ರೀಗಳ ಪುಣ್ಯಸ್ಮರಣೋತ್ಸವ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯ ಎಷ್ಟು ವರುಷ ಬಾಳಿದರೂ ಒಂದಿಲ್ಲೊಂದು ದಿನ ಅಗಲದೇ ಬೇರೆ ದಾರಿಯಿಲ್ಲ. ಅರಿವಿನ ಜನ್ಮದಲ್ಲಿ ಹುಟ್ಟಿ ಆದರ್ಶ ಬದುಕನ್ನು ಕಟ್ಟಿಕೊಳ್ಳದಿದ್ದರೆ ಜೀವನ ವ್ಯರ್ಥವಾಗುತ್ತದೆ. ವ್ಯಕ್ತಿ ಜೀವನದಲ್ಲಿ ಸಂಪತ್ತು ಗಳಿಸದಿದ್ದರೂ ಪರವಾಗಿಲ್ಲ. ಆದರೆ ಸದ್ಗುಣಗಳನ್ನು ಬೆಳೆಸಿಕೊಂಡು ಬಾಳುವುದನ್ನು ಕಲಿಯಬೇಕಾಗುತ್ತದೆ. ವೀರಶೈವ ಧರ್ಮದಲ್ಲಿ ಅಂತರಂಗ ಮತ್ತು ಬಹಿರಂಗ ಶುದ್ಧಿಯಿಂದ ಜೀವನ ಉಜ್ವಲಗೊಳ್ಳಲು ಸಾಧ್ಯವಾಗುವುದೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ್ದಾರೆ ಎಂದರು.

ನೇತೃತ್ವ ವಹಿಸಿದ ಬಿಳಕಿ ಹಿರೇಮಠದ ರಾಚೋಟೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಇಂದಿನ ಕಾಲದಲ್ಲಿ ಅನ್ಯಾಯ, ಅಸತ್ಯಗಳು ಹೆಚ್ಚುತ್ತಿವೆ. ಸತ್ಯವಂತರು ಸುಮ್ಮನಿರುವ ಕಾಲ ಇದಾಗಿದೆ. ವಿಚಾರ-ವಿಮರ್ಶೆಗಳು ಮಾನವ ಜೀವನದ ಉನ್ನತಿಗೆ ಕಾರಣವಾಗಬೇಕಲ್ಲದೇ ವಿನಾಶಕ್ಕಾಗಿ ಆಗಬಾರದು. ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಬಲದಿಂದ ಶ್ರೀ ಮಠದ ಅಭಿವೃದ್ಧಿ ಮತ್ತು ಭಕ್ತರ ಭಾವನೆಗಳನ್ನು ಬೆಳೆಸುವತ್ತ ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿರುವುದು ತಮಗೆ ತೃಪ್ತಿ ತಂದಿದೆ ಎಂದರು.

ಶಿವಮೊಗ್ಗದ ಡಾ.ಧನಂಜಯ ಸರ್ಜಿ ಅವರು 'ಆಹಾರ ಮತ್ತು ಆರೋಗ್ಯ' ಕುರಿತು ಉಪನ್ಯಾಸ ನೀಡಿದರು. ಇದೇ ಸಂದರ್ಭದಲ್ಲಿ ಪುತ್ರವರ್ಗ ಪರಂಪರೆಯ ಶ್ರೀಮದ್ರಂಭಾಪುರಿ ಶಾಖಾ ಬಿಳಕಿ ಹಿರೇಮಠಕ್ಕೆ ಚಿದಾನಂದಸ್ವಾಮಿ-ಶ್ರೀಮತಿ ಶಾಂಭವಿ ಇವರ ಸುಪುತ್ರ ಗುರುಪ್ರಸಾದ್ ವಟುವನ್ನು ರಾಚೋಟೇಶ್ವರ ಶ್ರೀಗಳು ನಿಯುಕ್ತಿಗೊಳಿಸಿ ಶ್ರೀ ರಂಭಾಪುರಿ ಜಗದ್ಗುರುಗಳಿಂದ ಅಶೀರ್ವಾದ ಮಾಡಿಸಲಾಯಿತು.

ಸಮಾರಂಭದ ಸಮ್ಮುಖ ವಹಿಸಿದ ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು ಮತ್ತು ಹುಲಿಕೆರೆ ವಿರೂಪಾಕ್ಷಲಿಂಗ ಶಿವಾಚಾರ್ಯ ಸ್ವಾಮಿಗಳು ವೀರಶೈವ ಧರ್ಮ ಸಂಸ್ಕೃತಿ ಮತ್ತು ಗುರು ಪರಂಪರೆಯ ಆದರ್ಶಗಳನ್ನು ವಿವರಿಸಿದರು. ಹೊನ್ನಾಳಿ ರಟ್ಟಿಹಳ್ಳಿ, ಹುಣಸಘಟ್ಟ, ತೊಗರ್ಸಿ ಹಿರೇಮಠ, ಚಿಕ್ಕಮಗಳೂರು, ಮಳಲಿ, ನಂದಿಪುರ ಮತ್ತು ಹಣ್ಣೆ ಮಠದ ಶ್ರೀಗಳು ಸಮಾರಂಭದಲ್ಲಿ ಉಪಸ್ಥಿತರಿದ್ದರು. ವೀರಶೈವ ಸಮಾಜದ ಧುರೀಣ-ರಾದ ಟಿ.ವಿ. ಈಶ್ವರಯ್ಯ, ಎನ್. ಜೆ. ರಾಜಶೇಖರ, ರುದ್ರೇಶ್, ಸಿದ್ಧಲಿಂಗಯ್ಯ, ಬಿ.ಕೆ. ಮೋಹನ್ ಮುಂತಾದ ಗಣ್ಯರು ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳಿಂದ ಗುರುರಕ್ಷೆ ಸ್ವೀಕರಿಸಿದರು. ಭದ್ರಾವತಿ ಕ್ಷೇತ್ರದ ಶಾಸಕ ಬಿ.ಕೆ. ಸಂಗಮೇಶ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿ, ಒಳಿತನ್ನು ಬೆಳೆಸುವುದೇ ಗುರುವಿನ ಧರ್ಮ. ಈ ದಿಶೆಯಲ್ಲಿ ಶ್ರೀ ಮಠದ ಶ್ರೀಗಳು ಮುನ್ನಡೆದು ಭಕ್ತರ ಬಾಳಿಗೆ ಬೆಳಕು ತೋರುತ್ತಿದ್ದಾ-ರೆ ಎಂದರು. ಸಮಾರಂಭದ ನಿರೂಪಣೆಯನ್ನು ತಾವರೆಕೆರೆ ಡಾ.ಸಿದ್ಧಲಿಂಗ ಶಿವಾಚಾರ್ಯರು ನಿರ್ವಹಿಸಿದರು.

# ಮಣ್ಣಿನ ಹಣತೆಗಳೊಂದಿಗೆ ದೀಪಾವಳಿ ಆಚರಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೀಪಾವಳಿ ಹಬ್ಬದಲ್ಲಿ ಅಬ್ಬರದ ಪಟಾಕಿ ಸಿಡಿಸಿ ಪರಿಸರ ಮಾಲಿನ್ಯ ಉಂಟುಮಾಡುವ ಬದಲಾಗಿ ಮಣ್ಣಿನ ಹಣತೆಗಳನ್ನು ಹಚ್ಚುವ ಮೂಲಕ ಪರಿಸರ ಸ್ನೇಹಿ, ಮಾಲಿನ್ಯ ರಹಿತ ದೀಪಾವಳಿಯನ್ನು ಆಚರಿಸೋಣ ಎಂದು ಮುಖ್ಯಾಧಿಕಾರಿ ಶಂಕರ ಹುಲ್ಲಮ್ಮನವರ ವಿನಂತಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಪ್ರಕಟಣೆ ನೀಡಿರುವ ಅವರು, ದೀಪಾವಳಿ ಹಬ್ಬದ ಸಂದರ್ಭದಲ್ಲಿ ನಿಷೇಧಿತ



ಪಟಾಕಿಗಳನ್ನು ಸಿಡಿಸಬೇಡಿ. ಇದರಿಂದ ಶಬ್ಧಮಾಲಿನ್ಯ, ವಾಯುಮಾಲಿನ್ಯ ಮತ್ತು ಘನತ್ಯಾಜ್ಯ ವಸ್ತು ಉತ್ಪತ್ತಿಯಾಗಿ ಪರಿಸರ ಮಾಲಿನ್ಯ ಹೆಚ್ಚಾಗುತ್ತದೆ. ಇದರಿಂದ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತದೆ. ಆದ್ದರಿಂದ, ಹಸಿರು ಪಟಾಕಿಗಳನ್ನು ಮಾತ್ರ ಸಿಡಿಸಬೇಕು. ಪರಿಸರ ಮಾಲಿನ್ಯವನ್ನು ನಿಯಂತ್ರಿಸಲು ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶವನ್ನು ಪಾಲನೆ ಮಾಡಿ, ಪರಿಸರ ಮಾಲಿನ್ಯ ಮತ್ತು ಪ್ರಾಣಹಾನಿಯನ್ನು ತಡೆಗಟ್ಟಲು ಪುರಸಭೆಯೊಂದಿಗೆ ಸಾರ್ವಜನಿಕರು ಕೈಜೋಡಿಸಬೇಕೆಂದು ತಿಳಿಸಿದ್ದಾರೆ.

# ಸಾಂಸ್ಕೃತಿಕ ಕಾರ್ಯಕ್ರಮಗಳಿಂದ ಮಾನಸಿಕ ಖಿನ್ನತೆ ದೂರ

■ ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಗುರೂಜಿ ಯುವ ಕ್ರೀಡಾ, ಸಾಂಸ್ಕೃತಿಕ ಕಲಾ ಸಂಸ್ಥೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರ ಸಹಯೋಗದಲ್ಲಿ 'ಕನ್ನಡ ನುಡಿ ಸಂಭ್ರಮ' ಕಾರ್ಯಕ್ರಮವು ಬಸವೇಶ್ವರ ನಗರದಲ್ಲಿ ನೆರವೇರಿತು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಡಾ. ಸುಭಾಷ್.ವಿ. ಶಿವನಗೌಡರ್ ಮಾತನಾಡಿ, ನಮ್ಮ ದೇಹದಲ್ಲಿರುವ ಅನೇಕ ಖಾಯಿಲೆ, ಮಾನಸಿಕ ಖಿನ್ನತೆಯನ್ನು ದೂರ ಮಾಡಬಹುದಾದ ಶಕ್ತಿ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿದೆ ಎಂದು ನುಡಿದರು.



ಪತ್ರಕರ್ತ ಆನಂದಯ್ಯ ವಿರಕ್ತಮಠ ಮಾತನಾಡಿ, ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಸಂಗೀತ ಮನೋವಿಕಾಸಕ್ಕೆ ಪೂರಕವಾಗಿದೆ. ಯುವ ಸಮೂಹ ಇಂತಹ ಹವ್ಯಾಸಗಳನ್ನು ರೂಢಿಸಿಕೊಂಡು ದುಶ್ಚಟಗಳಿಂದ ದೂರವಿರಬೇಕು ಎಂದು ನುಡಿದರು.

ಗದಗ-ಬೆಟಗೇರಿ ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಅನಿಲ ಅಬ್ಬಿಗೇರಿ ಮಾತನಾಡಿದರು. ಪ್ರಭಯ್ಯ ಬಸಯ್ಯ ದಂಡಾವತಿಮಠ, ಹಿರಿಯ ಸಾಹಿತಿಗಳಾದ ಡಾ. ವಿ.ವಿ. ಹಿರೇಮಠ, ರೋಟರಿ ಸೆಂಟ್ರಲ್ ಅಧ್ಯಕ್ಷ ವಿಜಯಕುಮಾರ್ ಹಿರೇಮಠ, ಗಣ್ಯ ವ್ಯಾಪಾರಸ್ಥರಾದ ಚಂದ್ರು ಮುಳುಗುಂದ, ಸಿದ್ದಲಿಂಗಪ್ಪ ಒಳಗುಂದಿ, ಮಂಜುನಾಥ್ ದಾಮೋದರ್ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು. ಸಂಸ್ಥೆಯ ಸಂಸ್ಥಾಪಕರು ಹಾಗೂ ಕಾರ್ಯದರ್ಶಿ ವೀರಯ್ಯ ಹೊಸಮಠ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ರಾಚಯ್ಯ ಹೊಸಮಠ ವಹಿಸಿಕೊಂಡಿದ್ದರು. ಕು. ರಾಹುಲ್ ರಾಠೋಡ ಕಲಾ ತಂಡದಿಂದ ಸುಗಮ ಸಂಗೀತ ಕಾರ್ಯಕ್ರಮ ನೆರವೇರಿತು. ಬಸವರಾಜ್ ಶಾನಬಾಳ್ ಹಾಗೂ ಎಸ್.ವಿ. ದೊಡ್ಮನಿ, ಮುತ್ತು ನಾಯ್ಕರ್, ಗಾಯಕರಾದ ಸಿದ್ದು, ಶಾರದಾ ಹೊಂಬಳ ಹಾಗೂ ಬಸವೇಶ್ವರನಗರದ ಎಲ್ಲ ಸಾರ್ವಜನಿಕರು ಭಾಗವಹಿಸಿದ್ದರು. ಕುಮಾರಸ್ವಾಮಿ ಹಿರೇಮಠ ಸ್ವಾಗತಿಸಿದರು.

# ವಸತಿರಹಿತ ಕುಟುಂಬಗಳ ಸಮೀಕ್ಷೆಗೆ ಆಗ್ರಹಿಸಿ ಮನವಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಉಸ್ತುವಾರಿ ಸಚಿವರ ಸೂಚನೆಯಂತೆ ವಸತಿರಹಿತ ಕುಟುಂಬಗಳ ಯಾದಿಯ ಸಮೀಕ್ಷೆ ನಡೆಸಿ, ವಸತಿರಹಿತ ಕುಟುಂಬಗಳಿಗೆ ಮನೆಗಳ ವಿತರಣೆಗೆ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ಸ್ಲಂ ಜನಾಂದೋಲನ-ಕರ್ನಾಟಕ ಮತ್ತು ಗದಗ ಜಿಲ್ಲಾ ಸ್ಲಂ ಸಮಿತಿ, ಗದಗ-ಬೆಟಗೇರಿ ವಸತಿರಹಿತರ ಹೋರಾಟ ಸಮಿತಿಯಿಂದ ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರಿಗೆ ಮನವಿ ಸಲ್ಲಿಸಿದರು.

ಸ್ಲಂ ಜನಾಂದೋಲನ-ಕರ್ನಾಟಕ ರಾಜ್ಯ ಸಂಚಾಲಕ ಇಮ್ತಿಯಾಜ ಆರ್.ಮಾನ್ವಿ ಮಾತನಾಡಿ, ಗದಗ-ಬೆಟಗೇರಿ ನಗರಸಭೆಯಿಂದ ವಸತಿರಹಿತ ಕುಟುಂಬಗಳ ಸಮೀಕ್ಷೆ ನಡೆಸಿ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲರು 2019ರಲ್ಲಿ ಸದರಿ 348 ಕುಟುಂಬಗಳಿಗೆ ಮನೆ ಮಂಜೂರಾತಿ ಪತ್ರಗಳನ್ನು ವಿತರಣೆ ಮಾಡಿ, ವಸತಿರಹಿತ ಕುಟುಂಬಗಳಿಗೆ ವಸತಿ ಸೌಲಭ್ಯಕ್ಕೆ ಅಗತ್ಯ ಕ್ರಮ ಕೈಗೊಳ್ಳಲು



ಪೌರಾಯುಕ್ತರಿಗೆ ಯಾದಿಯನ್ನು ಸಲ್ಲಿಸಲು ಸೂಚನೆ ನೀಡಿದ್ದರು. ಆದರೆ ಸಮೀಕ್ಷೆಯ ಕಾಲಕ್ಕೆ ಬಾಡಿಗೆದಾರರ ವರದಿಯನ್ನು ಪಡೆದುಕೊಳ್ಳಲು ಗೊಂದಲ ಸೃಷ್ಟಿಯಾಗಿದ್ದು, ಇದನ್ನು ಸರಿಪಡಿಸಿ ಸರಿಯಾದ ರೀತಿಯಲ್ಲಿ ಸಮೀಕ್ಷೆ ನಡೆಸಬೇಕೆಂದು ಆಗ್ರಹಿಸಿದರು.

ವಸತಿರಹಿತರ ಬೇಡಿಕೆಗಳ ಮನವಿಯನ್ನು ನಗರಸಭಾಧ್ಯಕ್ಷೆ ಉಷಾ ದಾಸರ, ವಿರೋಧ ಪಕ್ಷದ ನಾಯಕ ಎಲ್.ಡಿ. ಚಂದಾವರಿ, ನಗರಸಭೆ ಪೌರಾಯುಕ್ತರು ಹಾಗೂ ನಗರಸಭೆ ಸದಸ್ಯರು ಸ್ವೀಕರಿಸಿದರು.

ಗದಗ ಜಿಲ್ಲಾ ಸ್ಲಂ ಸಮಿತಿ ಉಪಾಧ್ಯಕ್ಷ ಅಶೋಕ ಕುಡತಿನ್ನಿ, ಕಾರ್ಯದರ್ಶಿ ಅಶೋಕ ಎಸ್.ಕುಸಬಿ, ವಸತಿರಹಿತ ಹೋರಾಟ ಸಮಿತಿ ಮುಖಂಡರಾದ ಪರವೀನಬಾನು ಹವಾಲ್ದಾರ, ವಂದನಾ ಶ್ಯಾವಿ, ಮಕ್ತುಮಸಾಬ ಮುಲ್ಲಾನವರ, ಮರ್ದಾನಬಿ ಬಳ್ಳಾರಿ, ಕಮಲವ್ವ ಚಲವಾದಿ, ಕವಿತಾ ಶ್ಯಾವಿ, ದ್ಯಾಮಣ್ಣ ಡೋಣಿ, ಶಾಜನಬಿ ಕರ್ನಾಚಿ, ಖಾಜಾಸಾಬ ಇಸ್ಮಾಯಿಲನವರ, ವಿಶಾಲಾಕ್ಷಿ ಹಿರೇಗೌಡ್ರ ಹಾಗೂ ಗದಗ-ಬೆಟಗೇರಿ ನಗರದ ನೂರಾರು ವಸತಿರಹಿತರು ಪಾಲ್ಗೊಂಡಿದ್ದರು.

# ಮೂರ್ತಿ ಪ್ರತಿಷ್ಠಾಪನೆ, ದೇವಸ್ಥಾನ ಲೋಕಾರ್ಪಣೆ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸಮೀಪದ ಸೊರಟೂರ ಗ್ರಾಮದ ಬನಶಂಕರಿದೇವಿ ಶಿಲಾ ಮೂರ್ತಿ ಪ್ರತಿಷ್ಠಾಪನೆ ಹಾಗೂ ದೇವಸ್ಥಾನ ಲೋಕಾರ್ಪಣೆ ಕಾರ್ಯಕ್ರಮ ನ.14ರಂದು ನೆರವೇರಲಿದೆ.

ಅಂದು ಸಾಯಂಕಾಲ 5 ಗಂಟೆಗೆ ಬನಶಂಕರಿದೇವಿಯ ಶಿಲಾ ಮೂರ್ತಿ ಮೆರವಣಿಗೆ ಜರುಗಲಿದೆ. ನ.15ರಂದು ಬೆಳಿಗ್ಗೆ ವಿವಿಧ ಪುಜಾ ಕೈಂಕರ್ಯಗಳು ನೆರವೇರಲಿದ್ದು, ನ.16ರಂದು ಬೆಳಿಗ್ಗೆ 7.15ಕ್ಕೆ ಬನಶಂಕರಿದೇವಿ ಶಿಲಾ ಮೂರ್ತಿ ಪ್ರತಿಷ್ಠಾಪನೆ ಜರುಗುವುದು. ನಂತರ 10.30ಕ್ಕೆ ನಡೆಯಲಿರುವ ಧರ್ಮಸಭೆಯ ದಿವ್ಯ ಸಾನ್ನಿಧ್ಯವನ್ನು ಕಪ್ಪತ್ತಗಿರಿಯ ಮಹಾಲಿಂಗೇಶ್ವರಮಠದ ಚನ್ನವೀರ ಮಹಾಸ್ವಾಮಿಗಳು ವಹಿಸಿಕೊಳ್ಳುವರು.ಸೊರಟೂರ ಅನ್ನದಾನೇಶ್ವರ ಮಠದ ಶಿವಯೋಗೀಶ್ವರ ಮಹಾಸ್ವಾಮಿಗಳು, ಮಣಕವಾಡ ದೇವಮಂದಿರದ ಮೃತ್ಯುಂಜಯ ಮಹಾಸ್ವಾಮಿಗಳು, ಮಲ್ಲಸಮುದ್ರ ಓಂಕಾರೇಶ್ವರಮಠದ ಫಕ್ಕೀರೇಶ್ವರ ಮಹಾಸ್ವಾಮಿಗಳು, ವರವಿ ಮೌನೇಶ್ವರಮಠದ ಮೌನೇಶ್ವರ ಮಹಾಸ್ವಾಮಿಗಳು ಪಾಲ್ಗೊಳ್ಳುವರು.

ಮುಖ್ಯ ಅತಿಥಿಗಳಾಗಿ ಸಚಿವ ಎಚ್.ಕೆ. ಪಾಟೀಲ್, ಹಾವೇರಿ ಲೋಕಸಭಾ ಸದಸ್ಯ ಶಿವಕುಮಾರ ಉದಾಸಿ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಮಾಜಿ ಶಾಸಕ ಡಿ.ಆರ್. ಪಾಟೀಲ್, ಗ್ರಾ.ಪಂ. ಅಧ್ಯಕ್ಷರಾದ ಜಯಶ್ರೀ ಬಂಕಾಪೂರ, ಗ್ರಾ.ಪಂ. ಉಪಾಧ್ಯಕ್ಷ ಮೆಲಗೇರಿಗೌಡ ಪಾಟೀಲ್ ಭಾಗವಹಿಸುವರು. ರಾತ್ರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗುವವು ಎಂದು ಬನಶಂಕರಿ ದೇವಸ್ಥಾನ ಸೇವಾ ಸಮಿತಿಯ ಪ್ರಕಟಣೆ ತಿಳಿಸಿದೆ.

# ಬಿಜೆಪಿ ರಾಜ್ಯಾಧ್ಯಕ್ಷರಾಗಿ ವಿಜಯೇಂದ್ರ ಆಯ್ಕೆಗೆ ಸಿಟಿ ರವಿ ಅಸಮಾಧಾನ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನೂತನ ಬಿಜೆಪಿ ರಾಜ್ಯಾಧ್ಯಕ್ಷರಾಗಿ ಮಾಜಿ ಸಿಎಂ ಯಡಿಯೂರಪ್ಪರ ಪುತ್ರ ಬಿವೈ ವಿಜಯೇಂದ್ರ ಆಯ್ಕೆ ಹಿನ್ನೆಲೆ ಮಾಜಿ ಶಾಸಕ ಸಿಟಿ ರವಿ ಅವರು ಪರೋಕ್ಷವಾಗಿ ಅಸಮಾಧಾನ ಹೊರ ಹಾಕಿದ್ದಾರೆ.



ಮಧ್ಯಪ್ರದೇಶದಿಂದ ಕೆಂಪೇಗೌಡ ಏರ್ಪೋರ್ಟ್ ನಲ್ಲಿ ಬಂದಿಳಿದ ಬಳಿಕ ಮಾತನಾಡಿದ ಅವರು, ಪಕ್ಷ ನೇಮಕ ಮಾಡಿದೆ ವೈಚಾರಿಕ ಭದ್ರತೆ ಜೊತೆಗೆ ಪಕ್ಷ ಕಟ್ಟುವ ಬೆಳೆಸುವ ಕೆಲಸ ಮಾಡಬೇಕಿದೆ. ಜೊತೆಗೆ 28 ಕ್ಕೆ 28 ಸ್ಥಾನ ಗೆಲ್ಲಿಸುವ ಹೊಣೆಗಾರಿಕೆ ಇದೆ ಯಶಸ್ವಿಯಾಗಲಿ. ಬದಲಾಗದೆ ಇರೋದು ಕಾರ್ಯಕರ್ತ ಅನ್ನೂದು ನಾನೊಬ್ಬ ಈಗ ಸಾಮಾನ್ಯ ಕಾರ್ಯಕರ್ತ ಎಂದರು.

ಇನ್ನೂ ನೂತನ ಅಧ್ಯಕ್ಷನ ಆಯ್ಕೆ ಬಗ್ಗೆ ಕಾಂಗ್ರೆಸ್ ಟ್ವಿಟ್ ವಿಚಾರವಾಗಿ ಮಾತನಾಡಿ, ಅಸಮಾಧಾನ ಬಗ್ಗೆ ಈಗ ನಾನು ಏನು ಮಾತನಾಡಲ್ಲ ಈಗಾಗಲೆ ಬಹಳಷ್ಟು ಮಾತನಾಡಿದ್ದೇನೆ. 35 ವರ್ಷಗಳಿಂದ ರಾಜಕೀಯ ಕ್ಷೇತ್ರದಲ್ಲಿದ್ದೀನಿ. ಬೂತ್ ಅಧ್ಯಕ್ಷನಿಂದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ವರೆಗೂ ಜವಬ್ದಾರಿ ನಿರ್ವಹಿಸಿದ್ದೀನಿ. ಈಗಾಗಲೆ ಬಹಳ ವಿಷಯ ಮಾತನಾಡಿ ಬಿಟ್ಟಿದ್ದೇನೆ. ಈಗ ಏನಾದ್ರು ಮಾತನಾಡಿದ್ರೆ ನಮ್ಮ ಮಾತೆ ನಮಗೆ ತಿರುಗುಬಾಣವಾಗುತ್ತೆ ಎಂದು ಅಸಮಾಧಾನ ಹೊರ ಹಾಕಿ ತಲೆ ಮೇಲೆ ಕೈಯಿಟ್ಟುಕೊಂಡು ಸಿಟಿ ರವಿ ಹೊರಟಿದ್ದಾರೆ.

# ಬಿವೈವಿ ಆಯ್ಕೆ ಸೂಕ್ತವಾಗಿದೆ

■ ವಿಜಯಸಾಕ್ಷಿ ಸುದ್ದಿ, ಮೈಸೂರು

ಬಿಜೆಪಿ ರಾಜ್ಯಾಧ್ಯಕ್ಷರಾಗಿ ವಿಜಯೇಂದ್ರ ಆಯ್ಕೆ ಒಳ್ಳೆಯ ಬೆಳವಣಿಗೆ ಎಂದು ಮೈಸೂರಿನಲ್ಲಿ ಜೆಡಿಎಸ್ ಪಕ್ಷದ ಶಾಸಕ ಜಿ.ಟಿ.ದೇವೇಗೌಡ ಹೇಳಿದರು.

ಬಿಎಸ್‌ವೈ ಸಿಎಂ ಆಗಬೇಕೆಂದು 50,000 ಜನ ಸೇರಿಸಿದವನು ನಾನು. ಯಡಿಯೂರಪ್ಪ ಮುಖ್ಯಮಂತ್ರಿ ಆದ ಮೇಲೆ ವೀರಶೈವ ಮಾತ್ರವಲ್ಲ, ಎಲ್ಲಾ ಸಮುದಾಯದವರನ್ನು ಸೇರಿಸಿಕೊಂಡು ಒಟ್ಟಾಗಿ ಹೋಗಿದ್ದಾರೆ. ಬಿಎಸ್‌ವೈ, ಎಚ್‌ಡಿಕೆ ಒಟ್ಟಾಗಿ ಹೋದ ಕಾರಣಕ್ಕಾಗಿಯೇ ಅಧಿಕಾರ ಸಿಕ್ಕಿದ್ದು. ಇಬ್ಬರೂ ಮುಖ್ಯಮಂತ್ರಿಯಾಗಲು ಸಾಧ್ಯವಾಯಿತು. ಈಗ ಅದೇ ರೀತಿ ಬಿಎಸ್‌ವೈ ಮಗನಿಗೆ ರಾಜ್ಯಾಧ್ಯಕ್ಷ ಸ್ಥಾನ ಕೊಡಲಾಗಿದೆ. ಮತ್ತೊಂದು ಕಡೆ ಕುಮಾರಸ್ವಾಮಿ ಜೆಡಿಎಸ್ ರಾಜ್ಯಾಧ್ಯಕ್ಷ ಆಗಿದ್ದಾರೆ. ಇಬ್ಬರೂ ಒಟ್ಟಾಗಿ ಹೋದರೆ ಕಾಂಗ್ರೆಸ್ ವಿರುದ್ಧ ಹೋರಾಟ ಸುಲಭವಾಗುತ್ತೆ.

ಬಿ.ವೈ.ವಿಜಯೇಂದ್ರ ಯುವ ನಾಯಕ, ಸಮುದಾಯದ ಬೆಂಬಲ ಇದೆ. ಯಡಿಯೂರಪ್ಪ ಸಿಎಂ ಆಗಲು ವಿಜಯೇಂದ್ರ ಚಾಣಾಕ್ಷತನವೂ ಇದೆ. ಬಿಎಸ್‌ವೈ ಮೂಲೆ ಗುಂಪು ಅನ್ನೋ ಕಾರಣಕ್ಕೆ ಬಿಜೆಪಿಗೆ ಹಿನ್ನಡೆಯಾಗಿತ್ತು. ಆದ್ದರಿಂದ ಬಿ.ವೈ.ವಿಜಯೇಂದ್ರ ಆಯ್ಕೆ ಸೂಕ್ತವಾಗಿದೆ ಎಂದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka